PDM

C.W

G.No. 3701733
18-2-22

# ಕರ್ನಾಟಕ ಸರ್ಕಾರದ ನಡುವಳಿಗಳು

**ವಿಷಯ:** 2021-22 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 25 ರ ಘೋಷಣೆಯಂತೆ ಸರ್ಕಾರಿ ಕಛೇರಿಗಳಲ್ಲಿ "ಶಿಶುಪಾಲನಾ ಕೇಂದ್ರ"ಗಳನ್ನು ತೆರೆಯುವ ಮೂಲಕ ಉದ್ಯೋಗಿಗಳಿಗೆ ಅನುಕೂಲ ಕಲ್ಪಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** ನಿರ್ದೇಶಕರು, ಮಮಅ ಇಲಾಖೆ ಇವರ ಏಕ ಕಡತ ಸಂಖ್ಯೆ: ಮಮಅಇ: ಮಕವಿ:ಶಿಪಾಕೇ: ಹೊ.ಯೋ:06:2021-22, ದಿನಾಂಕ:27-09-202

**ಪ್ರಸ್ತಾವನೆ:**

ಮೇಲೆ ಓದಲಾದ ಏಕಕಡತದಲ್ಲಿ ನಿರ್ದೇಶಕರು, ಮಮಅ ಇಲಾಖೆ ಇವರು ಆಯವ್ಯಯ ಭಾಷಣದ ಕಂಡಿಕೆ 25 ರಲ್ಲಿ ಜಿಲ್ಲಾ ಕೇಂದ್ರದಲ್ಲಿ ತಲಾ 2 ಪ್ರಮುಖ ಕಛೇರಿಗಳಲ್ಲಿ, ದುಡಿಯುವ ಮಹಿಳೆಯರಿಗಾಗಿ ಅನುಕೂಲವಾಗುವಂತೆ ಶಿಶುಪಾಲನಾ ಕೇಂದ್ರಗಳನ್ನು ತೆರೆಯಲು ಘೋಷಣೆ ಮಾಡಲಾಗಿದೆ. ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಚಿಕ್ಕಮಕ್ಕಳಿಗೆ ಹಾಲೂಣಿಸುವುದು ಹಾಗೂ ಇತರ ಪೋಷಣೆಗೆ ಸಂಬಂಧಿಸಿದಂತೆ ಕೆಲಸ ನಿರ್ವಹಿಸುವ ಮಹಿಳೆಯರಿಗೆ ಶಿಶುಪಾಲನಾ ಕೇಂದ್ರವು ಅತ್ಯಗತ್ಯವಾಗಿರುತ್ತದೆ. 0-6 ವರ್ಷದ ಒಳಗಿನ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ ಹಾಗೂ ಆರೈಕೆ ಮಾಡುವುದು ಅತ್ಯವಶ್ಯಕವಾಗಿದ್ದು, ಈ ಹಿನ್ನಲೆಯಲ್ಲಿ ಉದ್ಯೋಗಸ್ಥ ಮಹಿಳೆಯರಿಗೆ ಶಿಶುಪಾಲನಾ ಕೇಂದ್ರವು ಅತ್ಯಗತ್ಯವಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಬ್ರೇಕ್ ಅಪ್ ಪ್ಯಾರಾ ಅನೌನ್ಸ್‌ಮೆಂಟ್ ಆಯವ್ಯಯ ಘೋಷಣೆಯಲ್ಲಿ ಸರ್ಕಾರದ ಕಛೇರಿಗಳಲ್ಲಿ "ಶಿಶುಪಾಲನಾ ಕೇಂದ್ರ" ಗಳನ್ನು ಒಂದು ಜಿಲ್ಲೆಯ ಕೇಂದ್ರ ಸ್ಥಾನಕ್ಕೆ 2 "ಶಿಶುಪಾಲನಾ ಕೇಂದ್ರ" ಗಳಂತೆ (1 ಜಿಲ್ಲಾ ಕೇಂದ್ರ ಸ್ಥಾನಕ್ಕೆ 2 ರಂತೆ) ಶಿಸುಪಾಲನಾ ಕೇಂದ್ರಗಳನ್ನು ತೆರೆಯಲು ಲೆಕ್ಕ ಶೀರ್ಷಿಕೆ 2235-02-102-0-45 ರಡಿ ರೂ. 300.00 ಲಕ್ಷಗಳನ್ನು ಒದಗಿಸಿದೆ. ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವುದಕ್ಕೆ ಸಂಬಂಧಿಸಿದಂತೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ನಿರ್ದೇಶಕರು, ಮಮಅ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಅ 98 ಮಮಅ 2021, ಬೆಂಗಳೂರು, ದಿನಾಂಕ: 11.02.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2021-22 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 25 ರಲ್ಲಿ ಘೋಷಿಸಿರುವಂತೆ ಜಿಲ್ಲಾ ಕೇಂದ್ರದಲ್ಲಿ ತಲಾ 2 ಪ್ರಮುಖ ಸರ್ಕಾರಿ ಕಛೇರಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ತೆರೆಯುವ ಮೂಲಕ ಉದ್ಯೋಗಿಗಳಿಗೆ ಅನುಕೂಲ ಕಲ್ಪಿಸಲಾಗುವುದು ಎಂಬ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸದರಿ ಯೋಜನೆಯನ್ನು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿರುವ ಮಾರ್ಗಸೂಚಿಗಳನುಸಾರ ಅನುಷ್ಠಾನಗೊಳಿಸತಕ್ಕದ್ದು, ಈ ಯೋಜನೆಗೆ ತಗಲುವ ವೆಚ್ಚವನ್ನು 2021-22 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2235-02-10-0-45 ರಡಿ ಒದಗಿಸಿರುವ ರೂ. 300.00 ಲಕ್ಷಗಳ ಅನುದಾನದಲ್ಲಿ ಭರಿಸತಕ್ಕದ್ದು.

ನಿರ್ದೇಶನಾಲಯ
14 FEB 2022



Scanned with CamScanner

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 355 ವೆಚ್ಚ-10/2021, ದಿನಾಂಕ: 28.10.2021 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 57ಐಎಂಎಂ 2021, ದಿನಾಂಕ: 23.11.2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

N.S. Khatavker 11/02/2022

(ನಿರ್ಮಲಾ ಎಸ್. ಖಟಾವ್‌ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು- 560 001
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ,ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
8. ನಿರ್ದೇಶಕರು / ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತರನ ಮತ್ತು ಹಿರಿಯ ನಾಗರಿಕ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ,
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನಸೌಧ, ಬೆಂಗಳೂರು
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

Scanned with CamScanner

ಸರ್ಕಾರದ ಆದೇಶ ಸಂಖ್ಯೆ: ಮಮಅ 98 ಮಭಾಬ 2021, ಬೆಂಗಳೂರು, ದಿನಾಂಕ: 09.02.2022ಕ್ಕೆ ಅನುಬಂಧ

## ಶಿಶುಪಾಲನಾ ಕೇಂದ್ರಗಳು ಅನುಸರಿಸಬೇಕಾದ ಮಾರ್ಗಸೂಚಿಗಳು

2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಕಂಡಿಕೆ(25)ರಲ್ಲಿ ಜಿಲ್ಲಾ ಕೇಂದ್ರದಲ್ಲಿ ತಲಾ 2 ಪ್ರಮುಖ ಕಛೇರಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ತೆರೆಯುವ ಮೂಲಕ ಉದ್ಯೋಗಿಗಳಿಗೆ ಅನುಕೂಲ ಕಲ್ಪಿಸಲಾಗುವುದು ಎಂದು ಘೋಷಿಸಿದೆ.

ಮುಂದುವರೆದು, ಬ್ರೇಕ್‌ಅಪ್‌ಪ್ಯಾರಾ ಅನೌನ್ಸ್‌ಮೆಂಟ್ ಆಯವ್ಯಯ ಘೋಷಣೆಯಲ್ಲಿ ಸರ್ಕಾರದ ಕಛೇರಿಗಳಲ್ಲಿ "ಶಿಶುಪಾಲನಾ ಕೇಂದ್ರ" ಗಳನ್ನು ಒಂದು ಜಿಲ್ಲೆಯ ಕೇಂದ್ರ ಸ್ಥಾನಕ್ಕೆ 2 "ಶಿಶುಪಾಲನಾ ಕೇಂದ್ರ"ಗಳಂತೆ (1 ಜಿಲ್ಲಾ ಕೇಂದ್ರ ಸ್ಥಾನಕ್ಕೆ 2 ರಂತೆ) ಶಿಶುಪಾಲನಾ ಕೇಂದ್ರಗಳನ್ನು ತೆರೆಯಲು ಲೆಕ್ಕ ಶೀರ್ಷಿಕೆ:2235-02-102-0-45ರಡಿ ರೂ.300.00 ಲಕ್ಷಗಳನ್ನು ಒದಗಿಸಿದೆ.

ಸದರಿ ಘೋಷಣೆಯನ್ವಯ ದುಡಿಯುವ ಮಹಿಳೆಯರಿಗಾಗಿ ಅನುಕೂಲವಾಗುವಂತೆ ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಚಿಕ್ಕಮಕ್ಕಳಿಗೆ ಹಾಲೂಣಿಸುವುದು ಹಾಗೂ ಇತರ ಪೋಷಣೆಗೆ ಸಂಬಂಧಿಸಿದಂತೆ ಕೆಲಸ ನಿರ್ವಹಿಸುವ ಮಹಿಳೆಯರಿಗೆ ಶಿಶುಪಾಲನಾ ಕೇಂದ್ರವು ಅತ್ಯಗತ್ಯವಾಗಿರುತ್ತದೆ.

**ಉದ್ದೇಶ:-**

- 0-6 ವರ್ಷದ ಒಳಗಿನ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ ಹಾಗೂ ಆರೈಕೆ ಮಾಡುವುದು ಅತ್ಯವಶ್ಯಕವಾಗಿದ್ದು, ಶಿಶುಪಾಲನಾ ಕೇಂದ್ರವು ಕೇಂದ್ರದಲ್ಲಿ ಮಕ್ಕಳ ಆರೋಗ್ಯದ ದೃಷ್ಟಿಯಿಂದ ಶಿಶುಪಾಲನಾ ಕೇಂದ್ರವನ್ನು ಆರಂಭಿಸಬೇಕಾಗಿದೆ.

- ಮಕ್ಕಳ ಪೋಷಣೆ ಹಾಗೂ ಆರೋಗ್ಯದ ಸ್ಥಿತಿ ಸುಧಾರಿಸುವುದು.
- ಮಕ್ಕಳ ದೈಹಿಕ ಅರಿವಿನ ಸಾಮಾಜಿಕ ಹಾಗೂ ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು (ಸಮಗ್ರ ಅಭಿವೃದ್ಧಿ)

**ವ್ಯಾಪ್ತಿ:-**

ಜಿಲ್ಲಾಧಿಕಾರಿಗಳು ಹಾಗೂ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ ಆವರಣಗಳಲ್ಲಿ ಹೆಚ್ಚಿನ ಇಲಾಖೆಗಳು ಕಾರ್ಯನಿರ್ವಹಿಸುತ್ತಿರುವುದರಿಂದ ಸದರಿ ಸ್ಥಳಗಳಲ್ಲಿ ಶಿಶುಪಾಲನಾ ಕೇಂದ್ರವನ್ನು ಪ್ರಾರಂಭಿಸಿದ್ದಲ್ಲಿ ಉದ್ಯೋಗಸ್ಥ ಮಹಿಳೆಯರಿಗೆ ಅನುಕೂಲವಾಗುವುದು. 30 ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಛೇರಿಗಳಲ್ಲಿ ಒಟ್ಟು 60 ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಬೇಕಾಗಿದೆ. 30 ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಛೇರಿಗಳಲ್ಲಿ, 22 ಜಿಲ್ಲಾಧಿಕಾರಿಗಳ ಕಛೇರಿಗಳಲ್ಲಿ ಹಾಗೂ 8 ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಛೇರಿಗಳು ಒಂದೇ ಕಡೆ ಇರುವುದರಿಂದ ಸದರಿ ಜಿಲ್ಲೆಗಳ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಅಥವಾ ಸೂಕ್ತ ಕಛೇರಿಯಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಬೇಕಾಗಿದೆ.

ಒಟ್ಟು 30 ಜಿಲ್ಲೆಗಳಲ್ಲಿ 60 ಕೇಂದ್ರಗಳನ್ನು ಪ್ರಾರಂಭಿಸಲು ಹಾಗೂ ಈ ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ:2235-02-102-0-45-059 ಇತರ ಖರ್ಚುಗಳಡಿ ರೂ.300.00 ಲಕ್ಷಗಳನ್ನು ಒದಗಿಸಿದೆ.

Scanned with CamScanner

## ಅವಶ್ಯಕ ಮೂಲಭೂತ ಸೌಕರ್ಯಗಳು:

ಕೇಂದ್ರ ಸ್ಥಾಪನೆಗೆ ಉತ್ತಮ ಸ್ಥಳದ ಆಯ್ಕೆ ಮತ್ತು ಕಟ್ಟಡವನ್ನು ಗುಣಮಟ್ಟದ ಹಾಗೂ ಉಷ್ಣಾಂಶವನ್ನು ನಿಯಂತ್ರಿಸುವ ನೀರಿನ ಸೋರಿಕೆಯಾಗದ ಸಾಮಾಗ್ರಿಯಿಂದ ನಿರ್ಮಿಸಬೇಕು.

- ಉತ್ತಮ ಗಾಳಿ, ಬೆಳಕು ಮತ್ತು ಶೌಚಾಲಯದ ವ್ಯವಸ್ಥೆ ಹಾಗೂ ಸ್ವಚ್ಛತೆ ಇರಬೇಕು.
- ಮಕ್ಕಳಿಗೆ ಅಗತ್ಯವಿರುವ ತೊಟ್ಟಿಲು, ಹಾಸಿಗೆ ಹೊದಿಕೆಗಳು ನೀರದಂತೆ ತೊಳೆಯಬಹುದಾದ ಚಾಪೆಗಳು (ಮ್ಯಾಟ್) ಇರಬೇಕು.
- ಮಕ್ಕಳಿಗೆ ಗೊಂಬೆ ಮತ್ತು ಆಟಿಕೆ ಸಾಮಾಗ್ರಿಗಳ ವ್ಯವಸ್ಥೆ ಮಾಡಬೇಕು.
- ಸ್ಥಳೀಯವಾಗಿ ತಯಾರಿಸಲಾದ ಚನ್ನಪಟ್ಟಣ ಮತ್ತು ಕಿನ್ನಾಳ ಗೊಂಬೆಗಳಿಗೆ ಆದ್ಯತೆ ನೀಡಬೇಕು ಆದರೆ ದೂಳು ಹಿಡಿಯುವ /ಸಂಗ್ರಹಿಸುವ ಸ್ಟಫ್ಡ್ ಆಟಿಕೆಗಳು ಇರಬಾರದು.
- ಕೇಂದ್ರದಲ್ಲಿ ತೀಕ್ಷ್ಣವಾದ/ಚೂಪಾದ ಅಂಚುಗಳಿಲ್ಲದ ಪೀಠೋಪಕರಣಗಳ ವ್ಯವಸ್ಥೆ ಮಾಡಬೇಕು. ಕೇಂದ್ರದಲ್ಲಿ ಮಕ್ಕಳಿಗೆ ವಿದ್ಯುತ್‌ನ ಅಪಾಯವಾಗದಿರಲು ಮಕ್ಕಳ ನಿರೋಧಕ ವಿದ್ಯುತ್ ಬಿಂದುಗಳಿರಬೇಕು(Child Proofed Electrical Point).
- ಮಕ್ಕಳಿಗೆ ಹಾಲನ್ನು ಕಾಯಿಸಲು ಮತ್ತು ಪರ್ಯಾಯ ಆಹಾರವನ್ನು ತಯಾರಿಸಲು ಅನುಕೂಲವಾಗುವಂತೆ ಮೂಲ ಸೌಕರ್ಯ ಹಾಗೂ ಅಡುಗೆ ಪಾತ್ರೆ ಸಾಮಾಗ್ರಿಗಳಿರುವ ಅಡುಗೆ ಕೋಣೆ ಇರಬೇಕು.
- ಕೇಂದ್ರದಲ್ಲಿ ಮಕ್ಕಳಿಗೆ ಕಲಿಕಾ ಸಾಮಾಗ್ರಿಗಳು ಹಾಗೂ ಗೋಡೆಯ ಮೇಲೆ ಮಕ್ಕಳಿಗೆ ಉಪಯುಕ್ತವಾಗುವ ಆಕರ್ಷಣೀಯ ಚಿತ್ರಪಟಗಳಿರುವ ಮಕ್ಕಳ ಸ್ನೇಹಿ ವಾತಾವರಣ ಇರಬೇಕು.
- ಜಿಲ್ಲಾ ಮಟ್ಟದ ಸರ್ಕಾರಿ ಕಛೇರಿಯಲ್ಲಿ ಕೆಲಸ ಮಾಡುವ ಎಲ್ಲಾ ಸಿಬ್ಬಂದಿ/ನೌಕರರ 0-6 ವರ್ಷದ ಎಲ್ಲಾ ಮಕ್ಕಳಿಗೆ ಪ್ರವೇಶ ಇರಬೇಕು.
- ಶಿಶುಪಾಲನಾ ಕೇಂದ್ರ ಇರುವ ಮಾಹಿತಿಯು ಕಛೇರಿಯಲ್ಲಿ ಕೆಲಸ ಮಾಡುವ ಎಲ್ಲಾ ಸಿಬ್ಬಂದಿಗಳಿಗೆ ತಿಳಿದಿರಬೇಕು.
- ಕಛೇರಿ ಅವಧಿಗೆ ಅನುಕೂಲವಾಗುವಂತೆ ಈ ಕೇಂದ್ರ ಕಾರ್ಯನಿರ್ವಹಿಸಬೇಕು.
- ಕೇಂದ್ರದಲ್ಲಿ ಮಕ್ಕಳ ಸುರಕ್ಷತೆ ಹಾಗೂ ಆರೋಗ್ಯ ರಕ್ಷಣೆಗಾಗಿ ಆರೋಗ್ಯ ತಪಾಸಣೆ ಮತ್ತು ಔಷಧಿಗಳ ಕಿಟ್ ಇರಬೇಕು.
- ಶಿಶುಪಾಲನಾ ಕೇಂದ್ರಕ್ಕೆ ಹೊಂದಿಕೊಂಡು ಕೇಂದ್ರದಲ್ಲಿ ಮಹಿಳೆಯರ ವಿಶ್ರಾಂತಿಗೆ ಹಾಗೂ ಹಾಲೂಣಿಸುವ ತಾಯಂದಿರಿಗೆ ತಮ್ಮ ಮಗುವಿಗೆ ಹಾಲೂಣಿಸಲು ಖಾಸಗಿತನಕ್ಕೆ ಸೂಕ್ತ ವ್ಯವಸ್ಥೆ ಇರಬೇಕು.

## ಯೋಜನೆಯಡಿ ದೊರೆಯುವ ಸೌಲಭ್ಯ:

ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಚಿಕ್ಕ ಮಕ್ಕಳಿಗೆ ಹಾಲು ಉಣಿಸುವುದು ಹಾಗೂ ಇತರ ಪೋಷಣೆಗೆ ಸಂಬಂಧಿಸಿದಂತೆ ಕೆಲಸ ನಿರ್ವಹಿಸುವ ಮಹಿಳೆಯರಿಗೆ ಶಿಶುಪಾಲನಾ ಕೇಂದ್ರವು ಅತ್ಯಗತ್ಯವಾಗಿರುತ್ತದೆ.

0-6 ವರ್ಷದ ಒಳಗಿನ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ ಹಾಗೂ ಆರೈಕೆ ಮಾಡುವುದು ಅತ್ಯವಶ್ಯಕವಾಗಿದ್ದು, ಶಿಶುಪಾಲನಾ ಕೇಂದ್ರದಲ್ಲಿ ಮಕ್ಕಳ ಆರೋಗ್ಯದ ದೃಷ್ಟಿಯಿಂದ ಮಕ್ಕಳ ಪೋಷಣೆ ಹಾಗೂ ಆರೋಗ್ಯದ ಸ್ಥಿತಿ ಸುಧಾರಿಸುವುದು, ಮಕ್ಕಳ ದೈಹಿಕ ಅರಿವಿನ ಸಾಮಾಜಿಕ ಹಾಗೂ ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು (ಸಮಗ್ರ ಅಭಿವೃದ್ಧಿ) ಉದ್ದೇಶವಾಗಿದೆ.

## ಸ್ವಯಂಸೇವಾ ಸಂಸ್ಥೆಗಳನ್ನು ಆಯ್ಕೆ ಮಾಡುವ ವಿಧಾನ:-

ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಜಿಲ್ಲಾ ಮಟ್ಟದ ಸಮಿತಿಯ ಮೂಲಕ ಅರ್ಹ ಸ್ವಯಂಸೇವಾ ಸಂಸ್ಥೆಯನ್ನು ಆಯ್ಕೆ ಮಾಡತಕ್ಕದ್ದು.

Scanned with CamScanner

## ಜಿಲ್ಲಾ ಮಟ್ಟದ ಸಮಿತಿ:

| ಕ್ರ.ಸಂ. | ಅಧ್ಯಕ್ಷರು/ಸದಸ್ಯರುಗಳು | ಪದನಾಮ |
|---|---|---|
| 1 | ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್ | ಅಧ್ಯಕ್ಷರು |
| 2 | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು | ಸದಸ್ಯರು |
| 3 | ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಪ್ರತಿನಿಧಿ | ಸದಸ್ಯರು |
| 4 | ಸ್ಥಳೀಯ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿ | ಸದಸ್ಯರು |
| 5 | ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯ ಕಾರ್ಯದರ್ಶಿ |

## ಮೇಲ್ಕಂಡ ಸಮಿತಿಯ ಕಾರ್ಯನಿರ್ವಹಣೆ ಮತ್ತು ಜವಾಬ್ದಾರಿಗಳು:-

ಮೇಲ್ಕಂಡ ಸಮಿತಿಯು ಕನಿಷ್ಟ 6 ತಿಂಗಳಿಗೊಮ್ಮೆ ಸಭೆ ಸೇರಿ ಶಿಶುಪಾಲನಾ ಕೇಂದ್ರದ ಕಾರ್ಯವೈಖರಿ ಬಗ್ಗೆ ಪರಿಶೀಲಿಸುವುದು.

- ಶಿಶುಪಾಲನಾ ಕೇಂದ್ರದಲ್ಲಿರುವ ಮಕ್ಕಳ ಬಗ್ಗೆ ಕಾಳಜಿ ವಹಿಸುವಂತೆ ಸಂಬಂಧಪಟ್ಟ ಸಿಬ್ಬಂದಿಯವರಿಗೆ ಸೂಚನೆ ನೀಡುವುದು.
- ಸದರಿ ಸಮಿತಿಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಶಿಶುಪಾಲನಾ ಕೇಂದ್ರಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆ ಮಾಡುವುದು.

## ಶಿಶುಪಾಲನಾ ಕೇಂದ್ರಕ್ಕೆ ಸಿಬ್ಬಂದಿ ನೇಮಕಾತಿ ಪ್ರಕ್ರಿಯೆ:-

- ಸ್ವಯಂಸೇವಾ ಸಂಸ್ಥೆಯವರು ಶಿಶುಪಾಲನಾ ಕೇಂದ್ರಕ್ಕೆ ಶಿಕ್ಷಕಿಯರನ್ನು ನೇಮಕಾತಿ ಮಾಡುವಾಗ ಶಾಲಾ ಪೂರ್ವ ಶಿಕ್ಷಣ (Nursery Teacher Training) ತರಬೇತಿಯನ್ನು ಪಡೆದಿರುವವರಿಗೆ ಆದ್ಯತೆ ನೀಡುವುದು.
- ಶಾಲಾ ಪೂರ್ವ ಶಿಕ್ಷಣ (Nursery Teacher Training)ತರಬೇತಿ ಪಡೆಯದ ಆಯ್ಕೆಗೊಂಡ ಶಿಕ್ಷಕಿಯರಿಗೆ ಶಾಲಾ ಪೂರ್ವ ಶಿಕ್ಷಣ (Nursery Teacher Training) ತರಬೇತಿ ನೀಡಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವಂತೆ ಕ್ರಮಕೈಗೊಳ್ಳುವುದು.
- ಕೆಲಸ ನಿರ್ವಹಿಸುವ ಸಿಬ್ಬಂದಿಗಳ ವಯೋಮಿತಿಯು 20-40 ವರ್ಷದೊಳಗಿರಬೇಕು.
- ಶಿಶುಪಾಲನಾ ಕೇಂದ್ರದಲ್ಲಿ ಮಕ್ಕಳನ್ನು ಆರೈಕೆ ಮಾಡುವ ಸಹಾಯಕಿಯರು ಕನಿಷ್ಠ 10ನೇ ತರಗತಿ ಪಾಸಾಗಿರಬೇಕು.
- ಶಿಶುಪಾಲನಾ ಕೇಂದ್ರದ ಸಂಪೂರ್ಣ ಜವಾಬ್ದಾರಿ ನಿರ್ವಹಿಸುವ ಮಹಿಳೆಯು ಪದವಿ ಪಡೆದಿರಬೇಕು.
- ಸದರಿಯವರನ್ನು ನೇಮಕಾತಿ ಮಾಡುವ ಸಂದರ್ಭದಲ್ಲಿ ಅವರ ಕೌಶಲ್ಯತೆ,ಜ್ಞಾನ ಮತ್ತು ಅವರ ನಡವಳಿಕೆಯನ್ನು ಸಂದರ್ಶನದ ಮೂಲಕ ಪರಿಶೀಲಿಸಿ, ಉತ್ತಮರಾಗಿರುವರನ್ನು ಆಯ್ಕೆ ಮಾಡುವುದು.
- ಸದರಿ ಸಹಾಯಕಿ ಕಾರ್ಯಕರ್ತೆ ಮತ್ತು ಸಂಪೂರ್ಣ ಜವಾಬ್ದಾರಿ ಹೊಂದಲಿರುವ ಕ್ರೀಚ್ ಇನ್‌ಚಾರ್ಜ್ ರವರನ್ನು ಶಿಶುಪಾಲನಾ ಕೇಂದ್ರದ ಹತ್ತಿರದಲ್ಲಿ ವಾಸವಾಗಿರುವ ಮತ್ತು ಸುಲಭವಾಗಿ ಸಿಗುವಂತಹವರನ್ನು ಆಯ್ಕೆ ಮಾಡತಕ್ಕದ್ದು.

Scanned with CamScanner

ಅನುದಾನದ ವಿವರ:-

ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ:2235-02-102-0-45-059 ಇತರೆ ಖರ್ಚುಗಳಡಿ ರೂ.300.00 ಲಕ್ಷಗಳನ್ನು ಒದಗಿಸಿದ್ದು, ಜಿಲ್ಲೆಗೆ 2 ರಂತೆ ಒಟ್ಟು 60 ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಬೇಕಾಗಿದ್ದು, ಪ್ರತೀ ಕೇಂದ್ರಕ್ಕೆ ಸುಮಾರು ರೂ.5.00 ಲಕ್ಷಗಳ ಅನುದಾನದ ಅವಶ್ಯಕತೆಯಿದೆ. ವಿವರ ಈ ಕೆಳಕಂಡಂತಿರುತ್ತದೆ.

ಒಂದು ಶಿಶುಪಾಲನಾ ಕೇಂದ್ರಕ್ಕೆ ತಗಲುವ ಅಂದಾಜು ವೆಚ್ಚದ ವಿವರ

| ಕ್ರ.ಸಂ. | ಸಿಬ್ಬಂದಿಗಳ ಗೌರವಧನ | ವೆಚ್ಚದ ವಿವರ | |
|---|---|---|---|
| 1 | ಅ) ಶಿಕ್ಷಕಿ-1 | 10,000*12 | =1,20,000 |
| 2 | ಆ) ಸಹಾಯಕಿ-2 | 6000*12*2 | =1,44,000 |
| 3 | ಇ) ವೈದ್ಯರು<br>(ರೂ.500ರಂತೆ ಪ್ರತಿ ತಿಂಗಳಿಗೆ 2 ಭೇಟಿ) | 500*2*12 | =12,000 |
| 4 | ಎಸ್.ಎನ್.ಪಿ (ಆಹಾರ)-<br>(ಪ್ರತಿ ಮಗುವಿಗೆ ರೂ.15.00 ರಂತೆ 25 ಮಕ್ಕಳಿಗೆ ಪ್ರತಿ ಮಾಹೆಗೆ) (ಕೆಲಸದ ದಿನಗಳು-26) | 15*25*26*12 | =1,17,000 |
| 5 | ಇತರೆ ವೆಚ್ಚಗಳು<br>ಅ) ಸ್ವಚ್ಛತೆ<br>ಆ)ಪ್ರಥಮ ಚಿಕಿತ್ಸೆ ವೆಚ್ಚ (ಔಷಧಿಗಳು)<br>(1500ರಂತೆ ಪ್ರತಿ ತಿಂಗಳಿಗೆ) | 1,500*12 | =18,000 |
| 6 | ಆ) ಆಟಿಕೆಗಳು<br>(ವಾರ್ಷಿಕವಾಗಿ 4000ದಂತೆ) | 4,000*1 | =4,000 |
| 7 | ಅನಾವರ್ತಕ ವೆಚ್ಚ:<br>(ಪೀಠೋಪಕರಣ, ಪಾಕೋಪಕರಣ ಹಾಸಿಗೆ/ಹೊದಿಕೆ, ಕಾರ್ಪೆಟ್, ಬೆಡ್, ಇತ್ಯಾದಿ) | 50,000 | |
| | ಒಟ್ಟು: | **4,65,000/-** | |

ಒಂದು ಶಿಶುಪಾಲನಾ ಕೇಂದ್ರಕ್ಕೆ ವಾರ್ಷಿಕವಾಗಿ ರೂ.4,50,600/-ಗಳು ಬೇಕಾಗುತ್ತದೆ. ಒಟ್ಟು **ಯೋಜನಾ ವೆಚ್ಚ ರೂ.300.00 ಲಕ್ಷಗಳು.**

ಮೇಲೆ ವಿವರಿಸಿದಂತೆ, 2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ, 30 ಜಿಲ್ಲಾ ಕೇಂದ್ರಗಳಲ್ಲಿ ತಲಾ 2 ಪ್ರಮುಖ ಕಛೇರಿಗಳಲ್ಲಿ ಸದರಿ ಘೋಷಣೆಯನ್ವಯ ಉದ್ಯೋಗಸ್ಥ ಮಹಿಳೆಯರಿಗಾಗಿ ಅನುಕೂಲವಾಗುವಂತೆ, ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಮಕ್ಕಳಿಗೆ ಹಾಲೂಣಿಸುವುದು ಹಾಗೂ ಇತರ ಪೋಷಣೆಗೆ ಸಂಬಂಧಿಸಿದಂತೆ ಕೆಲಸ ನಿರ್ವಹಿಸುವ ಮಹಿಳೆಯರ ಮಕ್ಕಳಿಗೆ ಶಿಶುಪಾಲನಾ ಕೇಂದ್ರಗಳನ್ನು ತೆರೆಯುವ ಮೂಲಕ ಅನುಕೂಲ ಕಲ್ಪಿಸಲಾಗುವುದು.

ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿಯಾಗಿದ್ದು, ಅಗತ್ಯವಿರುವ ಅನುದಾನವನ್ನು ಲೆಕ್ಕಶೀರ್ಷಿಕೆ:2235-02-102-0-45ರಡಿ ಒದಗಿಸಿರುವ ರೂ.300.00 ಲಕ್ಷಗಳ ಅನುದಾನದಲ್ಲಿ ಭರಿಸತಕ್ಕದ್ದು.

N.S. Khatavkar 11/02/2022

**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

Scanned with CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ:ಮಮಇ 98 ಮಮಅ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 20.09.2022

**ಸೇರ್ಪಡೆ/ತಿದ್ದುಪಡಿ ಆದೇಶ**

ಸರ್ಕಾರದ ಆದೇಶ ಸಂಖ್ಯೆ: ಮಮಇ 98 ಮಮಅ 2021, ದಿನಾಂಕ: 11-02-2022ರ ಆದೇಶ ಭಾಗದ ಉಲ್ಲೇಖಿಸಲಾಗಿರುವ ಅನುಂಬಂಧದ ಮಾರ್ಗಸೂಚಿಗಳಲ್ಲಿ ಈ ಕೆಳಗಿನಂತೆ ಸೇರ್ಪಡೆ ಮ ಒದಿಕೊಳ್ಳತಕ್ಕದ್ದು.

**ಒಂದು ಶಿಶುಪಾಲನಾ ಕೇಂದ್ರಕ್ಕೆ ತಗಲುವ ಅಂದಾಜು ವೆಚ್ಚದ ವಿವರ**

ಜಿಲ್ಲಾ ಶಿಶು ಪಾಲನಾ ಕೇಂದ್ರಗಳು ಸರ್ಕಾರಿ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುವುದರಿಂದ ಫಲಾನುಭ ಪೋಷಕರಿಂದ ಈ ಕೆಳಕಂಡಂತೆ ವಂತಿಕೆಯನ್ನು ಪಡೆಯುವುದು.

- ಎ-ದರ್ಜೆ ಅಧಿಕಾರಿಗಳಿಂದ - ರೂ.1,000/- ಪ್ರತಿ ಮಾಹೆ ಪ್ರತಿ ಮಗುವಿಗೆ.
- ಬಿ-ದರ್ಜೆ ಅಧಿಕಾರಿಗಳಿಂದ - ರೂ.750/- ಪ್ರತಿ ಮಾಹೆ ಪ್ರತಿ ಮಗುವಿಗೆ.
- ಸಿ-ದರ್ಜೆ ಸಿಬ್ಬಂದಿಗಳಿಂದ - ರೂ.500/- ಪ್ರತಿ ಮಾಹೆ ಪ್ರತಿ ಮಗುವಿಗೆ.
- ಡಿ-ದರ್ಜೆ ಹಾಗೂ ಗುತ್ತಿಗೆ ನೌಕರರಿಂದ - ರೂ.200/- ಪ್ರತಿ ಮಾಹೆ ಪ್ರತಿ ಮಗುವಿಗೆ.
- ಪೋಷಕರಿಂದ ಸಂಗ್ರಹವಾದ ವಂತಿಕೆ ಹಣವನ್ನು ಬ್ಯಾಂಕ್ ಖಾತೆಯಲ್ಲಿರಿಸಿ ಲೆಕ್ಕಪತ್ರ ನಿರ್ವಹಿಸುವುದು ಹಾಗೂ ಶಿಶುಪಾಲನಾ ಕೇಂದ್ರದ ನಿರ್ವಹಣೆಗೆ ಅಗತ್ಯವಿದ್ದಲ್ಲಿ ಸದರಿ ಮೊತ್ತವನ್ನು ವಿನಿಯೋಗಿಸುವುದು.

**ಶಿಶುಪಾಲನಾ ಕೇಂದ್ರಕ್ಕೆ ಸಿಬ್ಬಂದಿ ನೇಮಕಾತಿ ಪ್ರಕ್ರಿಯೆ:-**

- ಜಿಲ್ಲಾ ಶಿಶುಪಾಲನಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕಿಯ ವಿದ್ಯಾರ್ಹತೆಯನ್ನು ಕನಿಷ್ಠ 10 ನೇ ತರಗತಿ ಹಾಗೂ ಸಹಾಯಕಿಯ ವಿದ್ಯಾರ್ಹತೆಯನ್ನು ಕನಿಷ್ಠ 7 ನೇ ತರಗತಿ ಎಂದು ನಿಗದಿ ಪಡಿಸುವುದು.

**ಸ್ವಯಂಸೇವಾ ಸಂಸ್ಥೆಗಳನ್ನು ಆಯ್ಕೆ ಮಾಡುವ ವಿಧಾನ:-**

- ಶಿಶು ಪಾಲನಾ ಕೇಂದ್ರಗಳ ನಿರ್ವಹಣೆಯನ್ನು ಮೊದಲ ಆದ್ಯತೆಯಗಿ ಜಿಲ್ಲಾ/ತಾಲ್ಲೂಕು ಸ್ತ್ರೀಶಕ್ತಿ ಒಕ್ಕೂಟಗಳಿಗೆ ನೀಡುವುದು. ಸ್ತ್ರೀಶಕ್ತಿ ಒಕ್ಕೂಟಗಳು ನಿರಾಕರಿಸಿದಲ್ಲಿ ಸ್ವಯಂ ಸೇವಾ ಸಂಸ್ಥೆ/ಸ್ವಸಹಾಯ ಸಂಘಗಳನ್ನು ಶಿಶು ಪಾಲನಾ ಕೇಂದ್ರಗಳ ನಿರ್ವಹಣೆಗೆ ನೇಮಿಸುವುದು.

22 SEP 2022

1010



Scanned with CamScanner

ಮುಂದುವರೆದು ಈ ಕೆಳಗಿನಂತೆ ತಿದ್ದಿ ಓದಿಕೊಳ್ಳತಕ್ಕದ್ದು.

**ಜಿಲ್ಲಾ ಮಟ್ಟದ ಸಮಿತಿ**

| ಕ್ರ.ಸಂ. | ಅಧ್ಯಕ್ಷರು/ಸದಸ್ಯರು | ಪದನಾಮ |
|---|---|---|
| 1. | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2. | ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ | ಉಪಾಧ್ಯಕ್ಷರು |
| 3. | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು | ಸದಸ್ಯರು |
| 4. | ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಪ್ರತಿನಿಧಿ | ಸದಸ್ಯರು |
| 5. | ಸ್ಥಳೀಯ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿ | ಸದಸ್ಯರು |
| 6. | ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

N.S. Khatavkar

(ನಿರ್ಮಲಾ ಎಸ್. ಖಟಾವ್‌ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-1
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು- 560 001
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ,ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
8. ನಿರ್ದೇಶಕರು / ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ,
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನಸೌಧ, ಬೆಂಗಳೂರು
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

Scanned with CamScanner

# ತಾಲ್ಲೂಕು ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲು ಅನುಸರಿಸಬೇಕಾದ ಮಾರ್ಗಸೂಚಿಗಳು

2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ(143) ರಲ್ಲಿ " ಪ್ರತಿ ಜಿಲ್ಲೆಯ ಎರಡು ತಾಲ್ಲೂಕು ಕೇಂದ್ರಗಳಲ್ಲಿ ಹಾಗೂ ಅತೀ ಹೆಚ್ಚು ಮಹಿಳಾ ಕಾರ್ಮಿಕರ ಸಾಂದ್ರತೆ ಇರುವ ಪ್ರದೇಶಗಳಲ್ಲಿ ಶಿಶು ಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿದೆ.

ಮಕ್ಕಳ ಪೋಷಣೆ, ಆರೈಕೆ ಹಾಗೂ ಸುರಕ್ಷತೆ ದೃಷ್ಟಿಯಿಂದ ದುಡಿಯುವ ಮಹಿಳೆಯರಿಗೆ ಶಿಶುಪಾಲನಾ ಕೇಂದ್ರವು ಅತ್ಯಗತ್ಯವಾಗಿರುತ್ತದೆ.

## ಉದ್ದೇಶ:-

- 6 ತಿಂಗಳಿಂದ - 6 ವರ್ಷದ ಒಳಗಿನ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ ಹಾಗೂ ಸುರಕ್ಷತೆ ಒದಗಿಸುವುದು
- ಮಕ್ಕಳ ಪೋಷಣೆ ಹಾಗೂ ಆರೋಗ್ಯದ ಸ್ಥಿತಿ ಸುಧಾರಿಸುವುದು.
- ಮಕ್ಕಳ ದೈಹಿಕ ಅರಿವಿನ ಸಾಮಾಜಿಕ ಹಾಗೂ ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು (ಸಮಗ್ರ ಅಭಿವೃದ್ಧಿ).

## ವ್ಯಾಪ್ತಿ:-

ಅತೀ ಹೆಚ್ಚು ಮಹಿಳಾ ಕಾರ್ಮಿಕರ ಸಾಂದ್ರತೆ ಇರುವ ಪ್ರದೇಶಗಳನ್ನು ಗುರುತಿಸಿ ಪ್ರತಿ ಜಿಲ್ಲೆಯ ಎರಡು ತಾಲ್ಲೂಕು ಕೇಂದ್ರಗಳಲ್ಲಿ ಶಿಶು ಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು.

## ಶಿಶು ಪಾಲನಾ ಕೇಂದ್ರಗಳು ಹೊಂದಿರಬೇಕಾದ ಮೂಲಭೂತ ಸೌಕರ್ಯಗಳು:

- ಶಿಶುಪಾಲನಾ ಕೇಂದ್ರದ ಸಮಯವನ್ನು ಬೆಳಿಗ್ಗೆ 9.30 ರಿಂದ ಸಂಜೆ 6.00 ಗಂಟೆಯವರೆಗೆ ನಿಗದಿಪಡಿಸುವುದು.
- ಮಕ್ಕಳ ಭದ್ರತೆ ದೃಷ್ಟಿಯಿಂದ **ನೆಲ ಮಹಡಿಯಲ್ಲಿ** ಶಿಶು ಪಾಲನಾ ಕೇಂದ್ರವು ಕಾರ್ಯನಿರ್ವಹಿಸಬೇಕು. ಆವರಣದಲ್ಲಿ ತೆರೆದ ಬಾವಿ, ತೆರೆದ ಚರಂಡಿ , ಕಸದ ತೊಟ್ಟಿ, ಆಳವಾದ ಗುಂಡಿ ಇತ್ಯಾದಿಗಳು ಇರಬಾರದು.
- ಕಟ್ಟಡವನ್ನು ಗುಣಮಟ್ಟದ ಹಾಗೂ ಉಷ್ಣಾಂಶವನ್ನು ನಿಯಂತ್ರಿಸುವ ನೀರಿನ ಸೋರಿಕೆಯಾಗದ ಸಾಮಾಗ್ರಿಯಿಂದ ನಿರ್ಮಿಸಿರಬೇಕು.
- ಉತ್ತಮ ಗಾಳಿ, ಬೆಳಕು ಮತ್ತು ಶೌಚಾಲಯದ ವ್ಯವಸ್ಥೆ ಹಾಗೂ ಸ್ವಚ್ಛತೆ ಇರಬೇಕು.
- ಕೇಂದ್ರದ ಕೊಠಡಿಯು **ಕನಿಷ್ಟ 250 ರಿಂದ 300 ಚದರಅಡಿ** ವಿಸ್ತೀರ್ಣವನ್ನು ಹೊಂದಿರಬೇಕು. ಇದರಿಂದ ಮಕ್ಕಳ ಆಟ, ಕಲಿಕೆ ಹಾಗೂ ವಿಶ್ರಾಂತಿಗೆ ಸಹಾಯಕವಾಗುವುದು.



Scanned with CamScanner

- ಶಿಶು ಪಾಲನಾ ಕೇಂದ್ರವು ಸುರಕ್ಷಿತ ನೀರಿನ ವ್ಯವಸ್ಥೆ ಇರುವ ಪ್ರತ್ಯೇಕ ಅಡುಗೆ ಕೋಣೆ ಹೊಂದಿದ್ದು, ಅಡುಗೆ ಕೋಣೆಯಲ್ಲಿ ಶೆಲ್ಫ್ ಗಳ (Shelves) ವ್ಯವಸ್ಥೆ ಇರತಕ್ಕದ್ದು.
- ಕೇಂದ್ರವು ನೀರಿನ ವ್ಯವಸ್ಥೆ ಇರುವ **ಮಕ್ಕಳ ಸ್ನೇಹಿ ಶೌಚಾಲಯ** ಹಾಗೂ ಸಿಬ್ಬಂದಿಯ ಉಪಯೋಗಕ್ಕಾಗಿ ವಯಸ್ಕರ ಶೌಚಾಲಯವನ್ನು ಪ್ರತ್ಯೇಕವಾಗಿ ಹೊಂದಿರತಕ್ಕದ್ದು.
- ಮಕ್ಕಳಿಗೆ ಅಗತ್ಯವಿರುವ ತೊಟ್ಟಿಲು, ಹಾಸಿಗೆ ಹೊದಿಕೆಗಳು ಸೇರಿದಂತೆ ತೊಳೆಯಬಹುದಾದ ಚಾಪೆಗಳು (ಮ್ಯಾಟ್) ಇರಬೇಕು.
- ಮಕ್ಕಳಿಗೆ ವಿಷಕಾರಿಯಲ್ಲದ (Non-toxic) ಗೊಂಬೆ ಮತ್ತು ಆಟಿಕೆ ಸಾಮಾಗ್ರಿಗಳ ವ್ಯವಸ್ಥೆ ಮಾಡಬೇಕು.
- ಸ್ಥಳೀಯವಾಗಿ ತಯಾರಿಸಲಾದ ಚನ್ನಪಟ್ಟಣ ಮತ್ತು ಕಿನ್ನಾಳ ಗೊಂಬೆಗಳಿಗೆ ಆದ್ಯತೆ ನೀಡಬೇಕು. ಆದರೆ ದೂಳು ಹಿಡಿಯುವ /ಸಂಗ್ರಹಿಸುವ ಸ್ಟಪ್ಡ್ ಆಟಿಕೆಗಳು ಇರಬಾರದು.
- ಕೇಂದ್ರದಲ್ಲಿ ತೀಕ್ಷ್ಣವಾದ/ಚೂಪಾದ ಅಂಚುಗಳಿಲ್ಲದ ಪೀಠೋಪಕರಣಗಳ ವ್ಯವಸ್ಥೆ ಮಾಡಬೇಕು. ಕೇಂದ್ರದಲ್ಲಿ ಮಕ್ಕಳಿಗೆ ವಿದ್ಯುತ್‌ನ ಅಪಾಯವಾಗದಿರಲು ಮಕ್ಕಳ ನಿರೋಧಕ ವಿದ್ಯುತ್ ಬಿಂದುಗಳಿರಬೇಕು(Child Proofed Electrical Point). ಸ್ವಿಚ್ ಬೋರ್ಡ್ ಗಳು ಮಕ್ಕಳ ಕೈಗೆ ಎಟುಕದಂತೆ ಇರಬೇಕು.
- ಮಕ್ಕಳಿಗೆ ಹಾಲನ್ನು ಕಾಯಿಸಲು ಮತ್ತು ಪರ್ಯಾಯ ಆಹಾರವನ್ನು ತಯಾರಿಸಲು ಅನುಕೂಲವಾಗುವಂತೆ ಮೂಲ ಸೌಕರ್ಯ ಹಾಗೂ ಅಡುಗೆ ಪಾತ್ರೆ ಸಾಮಾಗ್ರಿಗಳಿರುವ ಅಡುಗೆ ಕೋಣೆ ಇರಬೇಕು.
- ಕೇಂದ್ರದಲ್ಲಿ ಮಕ್ಕಳಿಗೆ ಕಲಿಕಾ ಸಾಮಾಗ್ರಿಗಳು ಹಾಗೂ ಗೋಡೆಯ ಮೇಲೆ ಮಕ್ಕಳಿಗೆ ಉಪಯುಕ್ತವಾಗುವ ಆಕರ್ಷಣೀಯ ಚಿತ್ರಪಟಗಳಿರುವ ಮಕ್ಕಳ ಸ್ನೇಹಿ ವಾತಾವರಣ ಇರಬೇಕು.
- ಶಿಶು ಪಾಲನಾ ಕೇಂದ್ರವು ಅವಶ್ಯಕತೆ ಇರುವಷ್ಟು ಫ್ಯಾನ್ ಗಳ ವ್ಯವಸ್ಥೆ ಹೊಂದಿರಬೇಕು.
- ವಿಕಲಚೇತನ ಮಕ್ಕಳಿಗಾಗಿ ರಾಂಪ್ಸ್ ಹಾಗೂ ಹ್ಯಾಂಡ್ ರೇಲ್ಸ್ ಅಳವಡಿಸಿರಬೇಕು.
- ಕೇಂದ್ರದಲ್ಲಿ ಮಕ್ಕಳ ಸುರಕ್ಷತೆ ಹಾಗೂ ಆರೋಗ್ಯ ರಕ್ಷಣೆಗಾಗಿ ಔಷಧಿಗಳ ಕಿಟ್ ಇರಬೇಕು. ಪ್ರತಿ ಮಾಹೆ ಎರಡು ಬಾರಿ ವೈದ್ಯಾಧಿಕಾರಿಗಳಿಂದ ಕಡ್ಡಾಯ ಮಕ್ಕಳ ಆರೋಗ್ಯ ತಪಾಸಣೆಗೆ ಕ್ರಮ ವಹಿಸುವುದು.
- ಶಿಶುಪಾಲನಾ ಕೇಂದ್ರಕ್ಕೆ ಹೊಂದಿಕೊಂಡು ಕೇಂದ್ರದಲ್ಲಿ ಮಹಿಳೆಯರ ವಿಶ್ರಾಂತಿಗೆ ಹಾಗೂ ಹಾಲೂಣಿಸುವ ತಾಯಂದಿರಿಗೆ ತಮ್ಮ ಮಗುವಿಗೆ ಹಾಲೂಣಿಸಲು ಖಾಸಗಿತನಕ್ಕೆ ಸೂಕ್ತ ವ್ಯವಸ್ಥೆ ಇರಬೇಕು.
- ಮಕ್ಕಳ ದಾಖಲಾತಿ ವಹಿ, ಹಾಜರಾತಿ ವಹಿ, ಆಹಾರ ವಿತರಣಾ ವಹಿ, ವೈದ್ಯಾಧಿಕಾರಿಗಳ ಆರೋಗ್ಯ ತಪಾಸಣಾ ವಹಿ, ಖರ್ಚು-ವೆಚ್ಚಗಳ ವಹಿ, ಸಿಬ್ಬಂದಿ ಹಾಜರಾತಿ ವಹಿ, ಪೀಠೋಪಕರಣ ಹಾಗೂ ಆಟದ ಸಾಮಗ್ರಿಗಳ ದಾಸ್ತಾನು ವಹಿ, ಪೋಷಕರ ವಂತಿಕೆ ವಹಿ ಹಾಗೂ ಸಂದರ್ಶಕರ ವಹಿಗಳನ್ನು ನಿರ್ವಹಿಸುವುದು.
- ಫಲಾನುಭವಿ ಪೋಷಕರಿಂದ ಸಂದಾಯವಾಗುವ ವಂತಿಕೆ ಹಣವನ್ನು ಶಿಶುಪಾಲನಾ ಕೇಂದ್ರವನ್ನು ನಿರ್ವಹಿಸುತ್ತಿರುವ ಬ್ಯಾಂಕ್ ಖಾತೆಗೆ ಜಮಾ ಮಾಡುವುದು ಹಾಗೂ ಕೇಂದ್ರದ ನಿರ್ವಹಣೆಗಾಗಿ ಸದರಿ ಮೊತ್ತವನ್ನು ವೆಚ್ಚ ಭರಿಸಿ ಲೆಕ್ಕ ಪತ್ರ ನಿರ್ವಹಿಸುವುದು.



Scanned with CamScanner

**ಫಲಾನುಭವಿಗಳು:**

- 06 ತಿಂಗಳಿಂದ 06 ವರ್ಷದ ಮಕ್ಕಳು.
- ಪ್ರತಿ ಶಿಶು ಪಾಲನಾ ಕೇಂದ್ರವು ಗರಿಷ್ಠ 25 ಮಕ್ಕಳನ್ನು ಹೊಂದಿರಬಹುದಾಗಿದೆ.

**ಶಿಶು ಪಾಲನಾ ಕೇಂದ್ರವು ಕಾರ್ಯನಿರ್ವಹಿಸುವ ಅವಧಿ:**

- ತಿಂಗಳಲ್ಲಿ ಕನಿಷ್ಠ 26 ದಿನಗಳು.
- ಪ್ರತಿ ದಿನ 6-8 ಗಂಟೆ.

**ಯೋಜನೆಯಡಿ ದೊರೆಯುವ ಸೌಲಭ್ಯ:**

- 06 ತಿಂಗಳಿಂದ 06 ವರ್ಷದ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರ, ಪೋಷಣೆ, ಆರೈಕೆ ಹಾಗೂ ಸುರಕ್ಷತೆ.
- ಮಕ್ಕಳ ದೈಹಿಕ ಅರಿವಿನ ಸಾಮಾಜಿಕ ಹಾಗೂ ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು (ಸಮಗ್ರ ಅಭಿವೃದ್ಧಿ).

**ಶಿಶು ಪಾಲನಾ ಕೇಂದ್ರಗಳ ನಿರ್ವಹಣೆ:-**

ಶಿಶುಪಾಲನಾ ಕೇಂದ್ರಗಳ ನಿರ್ವಹಣೆಯನ್ನು ಮೊದಲ ಆದ್ಯತೆಯಾಗಿ ತಾಲ್ಲೂಕು ಸ್ತ್ರೀ ಶಕ್ತಿ ಒಕ್ಕೂಟಗಳಿಗೆ ನೀಡುವುದು. ತಾಲ್ಲೂಕು ಸ್ತ್ರೀ ಶಕ್ತಿ ಒಕ್ಕೂಟಗಳು ನಿರಾಕರಿಸಿದಲ್ಲಿ, ಸರ್ಕಾರದಿಂದ ದೃಢೀಕರಿಸಲ್ಪಟ್ಟ, ಮಕ್ಕಳ ಆರೈಕೆಗೆ ಸಂಬಂಧಪಟ್ಟ ವಿದ್ಯಾರ್ಹತೆ ಹೊಂದಿರುವ ಮಹಿಳಾ ಸಿಬ್ಬಂದಿಗಳನ್ನು ಒಳಗೊಂಡ ಸ್ವಯಂ ಸೇವಾ ಸಂಸ್ಥೆ/ಸ್ವಸಹಾಯ ಸಂಘ/ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟಗಳನ್ನು ಶಿಶು ಪಾಲನಾ ಕೇಂದ್ರಗಳ ನಿರ್ವಹಣೆಗೆ ನೇಮಿಸಬಹುದಾಗಿರುತ್ತದೆ.

**ಜಿಲ್ಲಾ ಮಟ್ಟದ ಸಮಿತಿ:**

ಶಿಶು ಪಾಲನಾ ಕೇಂದ್ರಗಳ ಉಸ್ತುವಾರಿ ಹಾಗೂ ಮೇಲ್ವಿಚಾರಣೆ ಮಾಡಲು ಜಿಲ್ಲಾ ಮಟ್ಟದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

| ಕ್ರ.ಸಂ. | ಅಧ್ಯಕ್ಷರು/ಸದಸ್ಯರುಗಳು | ಪದನಾಮ |
|---|---|---|
| 1 | ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್. | ಅಧ್ಯಕ್ಷರು |
| 2 | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು. | ಸದಸ್ಯರು |
| 3 | ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಪ್ರತಿನಿಧಿ. | ಸದಸ್ಯರು |
| 4 | ಸ್ಥಳೀಯ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿ. | ಸದಸ್ಯರು |
| 5 | ಶಿಶು ಪಾಲನಾ ಕೇಂದ್ರದ ಮಗುವಿನ ಒಬ್ಬ ಪೋಷಕರು | ಸದಸ್ಯರು |
| 6 | ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. | ಸದಸ್ಯ ಕಾರ್ಯದರ್ಶಿ |



Scanned with CamScanner

## ಸಮಿತಿಯ ಕಾರ್ಯನಿರ್ವಹಣೆ ಮತ್ತು ಜವಾಬ್ದಾರಿಗಳು:-

- ಸಮಿತಿಯು ಕನಿಷ್ಠ 6 ತಿಂಗಳಿಗೊಮ್ಮೆ ಸಭೆ ಸೇರಿ ಶಿಶುಪಾಲನಾ ಕೇಂದ್ರದ ಕಾರ್ಯವೈಖರಿ ಬಗ್ಗೆ ಪರಿಶೀಲಿಸುವುದು.
- ನಿಗದಿಪಡಿಸಿದ ದರದಲ್ಲಿ ಮಕ್ಕಳಿಗೆ ನೀಡಬಹುದಾದ ಆಹಾರದ ಮೆನುವನ್ನು ನಿರ್ಧರಿಸುವುದು.
- ಶಿಶುಪಾಲನಾ ಕೇಂದ್ರದಲ್ಲಿರುವ ಮಕ್ಕಳ ಬಗ್ಗೆ ಕಾಳಜಿ ವಹಿಸುವಂತೆ ಸಂಬಂಧಪಟ್ಟ ಸಿಬ್ಬಂದಿಯವರಿಗೆ ಸೂಚನೆ ನೀಡುವುದು.
- ಕೇಂದ್ರಕ್ಕೆ ಬಿಡುಗಡೆಯಾದ ಮೊತ್ತ, ಪೋಷಕರ ವಂತಿಕೆ ಇತ್ಯಾದಿ ವೆಚ್ಚಗಳ ಅನುದಾನ ನಿರ್ವಹಣೆಯನ್ನು ಪರಿಶೀಲಿಸುವುದು.
- ಶಿಶು ಪಾಲನಾ ಕೇಂದ್ರದ ಸಿಬ್ಬಂದಿಗಳನ್ನು ತರಬೇತಿಗೆ ನಿಯೋಜಿಸುವುದು.
- ಶಿಶುಪಾಲನಾ ಕೇಂದ್ರಕ್ಕೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು.
- ಸದರಿ ಸಮಿತಿಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಶಿಶುಪಾಲನಾ ಕೇಂದ್ರಕ್ಕೆ ಸಂಬಂಧಿಸಿದ ಇತರೆ ವಿಷಯಗಳ ಬಗ್ಗೆ ಚರ್ಚೆ ಮಾಡುವುದು.

## ಶಿಶುಪಾಲನಾ ಕೇಂದ್ರಕ್ಕೆ ಸಿಬ್ಬಂದಿ ನೇಮಕಾತಿ ಪ್ರಕ್ರಿಯೆ:-

- ಶಿಶುಪಾಲನಾ ಕೇಂದ್ರಕ್ಕೆ ಶಿಕ್ಷಕಿಯರನ್ನು ನೇಮಕಾತಿ ಮಾಡುವಾಗ ಶಾಲಾ ಪೂರ್ವ ಶಿಕ್ಷಣ (Nursery Teacher Training) ತರಬೇತಿಯನ್ನು ಪಡೆದಿರುವವರಿಗೆ ಆದ್ಯತೆ ನೀಡುವುದು.
- ಶಾಲಾ ಪೂರ್ವ ಶಿಕ್ಷಣ (Nursery Teacher Training)ತರಬೇತಿ ಪಡೆಯದ ಆಯ್ಕೆಗೊಂಡ ಶಿಕ್ಷಕಿಯರಿಗೆ ಶಾಲಾ ಪೂರ್ವ ಶಿಕ್ಷಣ (Nursery Teacher Training) ತರಬೇತಿ ನೀಡಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವಂತೆ ಕ್ರಮಕೈಗೊಳ್ಳುವುದು.
- ಕೆಲಸ ನಿರ್ವಹಿಸುವ ಸಿಬ್ಬಂದಿಗಳ ವಯೋಮಿತಿಯು 20-40 ವರ್ಷದೊಳಗಿರಬೇಕು.
- ಶಿಶುಪಾಲನಾ ಕೇಂದ್ರದಲ್ಲಿ ಮಕ್ಕಳನ್ನು ಆರೈಕೆ ಮಾಡುವ ಸಹಾಯಕಿಯರು ಕನಿಷ್ಠ **10ನೇ ತರಗತಿ** ಪಾಸಾಗಿರಬೇಕು.
- ಶಿಶುಪಾಲನಾ ಕೇಂದ್ರದ ಸಂಪೂರ್ಣ ಜವಾಬ್ದಾರಿ ನಿರ್ವಹಿಸುವ ಮಹಿಳೆಯು **ಪದವಿ ಪಡೆದಿರಬೇಕು.**
- ಸಿಬ್ಬಂದಿಯನ್ನು ನೇಮಕಾತಿ ಮಾಡುವ ಸಂದರ್ಭದಲ್ಲಿ ಅವರ ಕೌಶಲ್ಯತೆ ಜ್ಞಾನ ಮತ್ತು ಅವರ ನಡವಳಿಕೆಯನ್ನು ಸಂದರ್ಶನದ ಮೂಲಕ ಪರಿಶೀಲಿಸಿ, ಉತ್ತಮರಾಗಿರುವರನ್ನು ಆಯ್ಕೆ ಮಾಡುವುದು.
- ಕೇಂದ್ರದ ಸಹಾಯಕಿ, ಕಾರ್ಯಕರ್ತೆ ಮತ್ತು ಸಂಪೂರ್ಣ ಜವಾಬ್ದಾರಿ ಹೊಂದಲಿರುವ ಕ್ರೀಚ್ ಇನ್‌ಚಾರ್ಜ್ ರವರನ್ನು ಶಿಶುಪಾಲನಾ ಕೇಂದ್ರದ ಹತ್ತಿರದಲ್ಲಿ ವಾಸವಾಗಿರುವ ಮತ್ತು ಸುಲಭವಾಗಿ ಸಿಗುವಂತಹವರನ್ನು ಆಯ್ಕೆ ಮಾಡತಕ್ಕದ್ದು.



Scanned with CamScanner

## ಅನುದಾನದ ವಿವರ:-

**ಒಂದು ಶಿಶುಪಾಲನಾ ಕೇಂದ್ರಕ್ಕೆ ತಗಲುವ ಅಂದಾಜು ವೆಚ್ಚದ ವಿವರ.**

| ಕ್ರ.ಸ | ವಿವರ | ಮಾಸಿಕ ವೆಚ್ಚ | ವಾರ್ಷಿಕ ವೆಚ್ಚ | ಷರಾ |
|---|---|---|---|---|
| 1. | ಶಿಕ್ಷಕಿ-1 | ರೂ.10,000 | 10,000*12=1,20,000 | |
| 2. | ಸಹಾಯಕಿ-1 | ರೂ.6,000 | 6,000*12=72,000 | |
| 3. | ಸಹಾಯಕಿ-1 | ರೂ.6,000 | 6,000*12=72,000 | |
| 4. | SNP, ಪ್ರತಿ ಮಗುವಿಗೆ ರೂ.15 | ರೂ.9,750 | 9,750*12=1,17,000 | |
| 5. | ವೈದ್ಯಾಧಿಕಾರಿಗಳ ಭೇಟಿ | ರೂ.1,000 | 1,000*12=12,000 | |
| 6. | ಆಟದ ಸಾಮಗ್ರಿ | - | 4,000*1=4,000 | |
| 7. | ಕೇಂದ್ರದ ಬಾಡಿಗೆ | ರೂ.5,000 | 5,000*12=60,000 | |
| 8. | ಅನಾವರ್ತಕ ವೆಚ್ಚ | - | 50,000*1=50,000 | |
| **ಒಟ್ಟು** | | | **ರೂ.5,07,000** | |
| 9. | ನಿರ್ವಹಣಾ ವೆಚ್ಚ | ರೂ.5,000 | 5000*12= 60,000 | ಪೋಷಕರಿಂದ ಪ್ರತಿ ಮಾಹೆ ಪ್ರತಿ ಮಗುವಿಗೆ ರೂ.200 ವಂತಿಕೆಯನ್ನು ಪಡೆಯುವುದು. ಇದನ್ನು ಕೇಂದ್ರದ ನಿರ್ವಹಣೆಗಾಗಿ ವೆಚ್ಚ ಭರಿಸಿ, ಲೆಕ್ಕಪತ್ರಗಳನ್ನು ಸಂಸ್ಥೆಯು ನಿರ್ವಹಿಸುವುದು. |
| **ಒಟ್ಟು** | | | **ರೂ.5,67,000** | |

(ಸರ್ಕಾರದ ಕಾರ್ಯದರ್ಶಿಗಳಿಂದ
ಅನುಮೋದಿಸಲ್ಪಟ್ಟಿದೆ.)

ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.



Scanned with CamScanner

# ಕರ್ನಾಟಕ ಸರ್ಕಾರದ ನಡುವಳಿಗಳು

**ವಿಷಯ:** 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 143 ರ ಘೋಷಣೆಯಂತೆ "ಸರ್ಕಾರವು ಪ್ರತಿ ಜಿಲ್ಲೆಯ ಎರಡು ತಾಲ್ಲೂಕು ಕೇಂದ್ರಗಳಲ್ಲಿ ಹಾಗೂ ಅತೀ ಹೆಚ್ಚು ಮಹಿಳಾ ಕಾರ್ಮಿಕರ ಸಾಂದ್ರತೆ ಇರುವ ಪ್ರದೇಶಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು" ಎಂಬ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರ ಏಕ ಕಡತ ಸಂಖ್ಯೆ: WCD/CW/OTHR/6/2022-WCD_WW-WOMEN AND CHILD DEVELOPMENT

**ಪ್ರಸ್ತಾವನೆ:**

2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 143 ರಲ್ಲಿ " **ಸರ್ಕಾರವು ಪ್ರತಿ ಜಿಲ್ಲೆಯ ಎರಡು ತಾಲ್ಲೂಕು ಕೇಂದ್ರಗಳಲ್ಲಿ ಹಾಗೂ ಅತೀ ಹೆಚ್ಚು ಮಹಿಳಾ ಕಾರ್ಮಿಕರ ಸಾಂದ್ರತೆ ಇರುವ ಪ್ರದೇಶಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು**" ಎಂದು ಘೋಷಣೆ ಮಾಡಲಾಗಿದ್ದು, ಈ ಯೋಜನೆಯು ಮುಂದುವರೆದ ಯೋಜನೆಯಾಗಿರುವುದರಿಂದ ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ-2235-02-102-0-45-059ರಡಿ 15 ಕೋಟಿಗಳ (1500.00 ಲಕ್ಷಗಳು) ಅನುದಾನವನ್ನು ನಿಗದಿಪಡಿಸಲಾಗಿದ್ದು, ಅದರಂತೆ ಪ್ರತಿ ಜಿಲ್ಲೆಯ 2 ತಾಲ್ಲೂಕುಗಳಲ್ಲಿ ಶಿಶು ಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲು ಘಟಕ ವೆಚ್ಚ ರೂ.5.67 ಲಕ್ಷಗಳ ಅನುದಾನದ ವಿವರ ಈ ಕೆಳಕಂಡಂತಿರುತ್ತದೆ.

| ಕ್ರ.ಸ | ವಿವರ | ಮಾಸಿಕ ವೆಚ್ಚ | ವಾರ್ಷಿಕ ವೆಚ್ಚ | ಷರಾ |
|---|---|---|---|---|
| 1. | ಶಿಕ್ಷಕಿ-1 | ರೂ.10,000 | 10,000*12=1,20,000 | |
| 2. | ಸಹಾಯಕಿ-1 | ರೂ.6,000 | 6,000*12=72,000 | |
| 3. | ಸಹಾಯಕಿ-1 | ರೂ.6,000 | 6,000*12=72,000 | |
| 4. | SNP, ಪ್ರತಿ ಮಗುವಿಗೆ ರೂ.15 | ರೂ.9,750 | 9,750*12=1,17,000 | |
| 5. | ವೈದ್ಯಾಧಿಕಾರಿಗಳ ಭೇಟಿ | ರೂ.1,000 | 1,000*12=12,000 | |
| 6. | ಆಟದ ಸಾಮಗ್ರಿ | - | 4,000*1=4,000 | |
| 7. | ಕೇಂದ್ರದ ಬಾಡಿಗೆ | ರೂ.5,000 | 5,000*12=60,000 | |
| 8. | ಅನಾವರ್ತಕ ವೆಚ್ಚ | - | 50,000*1=50,000 | |
| | | ಒಟ್ಟು | ರೂ.5,07,000 | |
| 9. | ಇತರೆ ವೆಚ್ಚ | ರೂ.5,000 | 5000*12=.60,000 | ಪೋಷಕರಿಂದ ಪ್ರತಿ ಮಾಹೆ ಪ್ರತಿ ಮಗುವಿಗೆ ರೂ.200 ವಂತಿಕೆಯನ್ನು ಪಡೆಯುವುದು |
| | | ಒಟ್ಟು= | **ರೂ.5,67,000** | |

ಮುಂದುವರೆದು, ಒಂದು ಶಿಶು ಪಾಲನಾ ಕೇಂದ್ರಕ್ಕೆ ರೂ.5.07 ಲಕ್ಷಗಳ ವೆಚ್ಚದಂತೆ 62 ಶಿಶು ಪಾಲನಾ ಕೇಂದ್ರಗಳಿಗೆ ಒಟ್ಟು ರೂ.314.34 ಲಕ್ಷಗಳ ಅನುದಾನದ ಅವಶ್ಯಕತೆ ಇರುತ್ತದೆ. ಮೇಲೆ ತಿಳಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2022-23ನೇ ಸಾಲಿನಲ್ಲಿ ಘೋಷಿಸಿದ "ಪ್ರತಿ ಜಿಲ್ಲೆಯ ಎರಡು ತಾಲ್ಲೂಕು ಕೇಂದ್ರಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸುವ ಯೋಜನೆಗೆ" ಆಡಳಿತಾತ್ಮಕ



Scanned with CamScanner

ಅನುಮೋದನೆ ನೀಡುವಂತೆ ಮೇಲೆ ಓದಲಾದ ಏಕ ಕಡತದಲ್ಲಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಅ 91 ಮಮಅ 2022, ಬೆಂಗಳೂರು, ದಿನಾಂಕ:16.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 143 ರಲ್ಲಿ ಘೋಷಿಸಿರುವಂತೆ **ಪ್ರತಿ ಜಿಲ್ಲೆಯ ಎರಡು ತಾಲ್ಲೂಕು ಕೇಂದ್ರಗಳಲ್ಲಿ ಹಾಗೂ ಅತೀ ಹೆಚ್ಚು ಮಹಿಳಾ ಕಾರ್ಮಿಕರ ಸಾಂದ್ರತೆ ಇರುವ ಪ್ರದೇಶಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲು** ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಯೋಜನೆಗೆ ತಗಲುವ ವೆಚ್ಚವನ್ನು 2022-23 ನೇ ಆಯವ್ಯಯದ ಮಿತಿಗೊಳಪಟ್ಟು ಲೆಕ್ಕ ಶೀರ್ಷಿಕೆ-2235-02-102-0-45-059 ರಡಿ ಒದಗಿಸಿರುವ ರೂ. 1500.00 ಲಕ್ಷಗಳ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/203/ವೆಚ್ಚ-10/2022, ದಿನಾಂಕ:16-04-2022 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಹೆಚ್.ಸರೋಜಮ್ಮ) 16/04
ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ),
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು- 560 001
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ,ಬೆಂಗಳೂರು.
5. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ನಿರ್ದೇಶಕರು / ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಎಲ್ಲಾ ಜಿಲ್ಲೆಯ,ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, .
9. ಎಲ್ಲಾ ಜಿಲ್ಲೆಯ,ಉಪ ನಿರ್ದೇಶಕರು.
10. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತರನ ಮತ್ತು ಹಿರಿಯ ನಾಗರಿಕ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ , ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನಸೌಧ, ಬೆಂಗಳೂರು
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

Scanned with CamScanner

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಸರ್ಕಾರದಿಂದ ನೀಡುವ ನಾರಿಶಕ್ತಿ ಪುರಸ್ಕಾರ ಮತ್ತು ರಾಜ್ಯ ಸರ್ಕಾರದ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ನೀಡಲು ರಚಿಸಲಾಗಿರುವ ಸಮಿತಿಯನ್ನು ಪರಿಷ್ಕರಿಸಿ ರಚಿಸುವ ಬಗ್ಗೆ

ಓದಲಾಗಿದೆ:
1. ಸರ್ಕಾರದ ಆದೇಶ ಸಂ.ಮಮಇ 192 ಮಮಅ 2014, ದಿನಾಂಕ:05.02.2015
2. ತಿದ್ದುಪಡಿ ಆದೇಶ ಸಂ.ಮಮಇ 114 ಮಮಅ 2015, ದಿನಾಂಕ:07.10.2015
3. ಸರ್ಕಾರದ ಆದೇಶ ಸಂ.ಮಮಇ 137 ಮಮಅ 2015, ದಿನಾಂಕ:25.02.2016
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇವರ ಪತ್ರ ಸಂಖ್ಯೆ:ಮಮಅ/ಮಕವಿ/ಸ.ರ:15:2018-19 ದಿನಾಂಕ:06.02.2019.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2015ನೇ ಸಾಲಿನಿಂದ ಕೇಂದ್ರ ಸರ್ಕಾರದಿಂದ ನೀಡುವ ರಾಜ್ಯ ಮಹಿಳಾ ಸಮ್ಮಾನ್ ಹಾಗೂ ಜಿಲ್ಲಾ ಮಹಿಳಾ ಸಮ್ಮಾನ್ ಪ್ರಶಸ್ತಿಗಾಗಿ ಅರ್ಹ ಮಹಿಳೆಯರನ್ನು ಆಯ್ಕೆ ಮಾಡಲು ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಸಮಿತಿಗಳನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಕೇಂದ್ರ ಸರ್ಕಾರದಿಂದ ನೀಡುವ ರಾಜ್ಯ ಮಹಿಳಾ ಸಮ್ಮಾನ್ ಮತ್ತು ಜಿಲ್ಲಾ ಮಹಿಳಾ ಸಮ್ಮಾನ್ ಪ್ರಶಸ್ತಿಗಳನ್ನು ಸ್ಥಗಿತಗೊಳಿಸಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಪ್ರಸ್ತುತ ಜಾರಿಗೆ ತಂದಿರುವ ನಾರೀಶಕ್ತಿ ಪುರಸ್ಕಾರ್ ಪ್ರಶಸ್ತಿಗಳಿಗಾಗಿ ಸ್ವೀಕರಿಸಲಾಗುವ ಅರ್ಜಿಗಳನ್ನು ಪರಿಶೀಲಿಸಲು ಈಗಾಗಲೇ ರಚಿಸಿರುವ ರಾಜ್ಯ ಮಟ್ಟದ ಸಮಿತಿಯನ್ನು ಮುಂದುವರೆಸಿ ಆದೇಶಿಸಿದೆ. ಆದರೆ, ಸದರಿ ಆದೇಶದಲ್ಲಿನ ಜಿಲ್ಲಾ ಮಟ್ಟದ ಸಮಿತಿಯನ್ನು ರದ್ದುಗೊಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಕಿತ್ತೂರು ರಾಣಿ ಚೆನ್ನಮ್ಮ, ಸ್ತ್ರೀಶಕ್ತಿ ಪುರಸ್ಕಾರ ಪ್ರಶಸ್ತಿ ಹಾಗೂ ಡಾ.ದುರ್ಗಾಬಾಯಿ ದೇಶ್‌ಮುಖ್ ಪ್ರಶಸ್ತಿ ನೀಡಲು ದಿನಾಂಕ:29.12.2012ರಲ್ಲಿ ರಚಿಸಲಾಗಿದ್ದ ಸಮಿತಿಯನ್ನು ಮಾರ್ಪಾಡಿಸಿ ನವೆಂಬರ್ 15ರಿಂದ ಜಾರಿಗೆ ಬರುವಂತೆ ಮುಂದಿನ 3 ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಆಯ್ಕೆ ಸಮಿತಿಯನ್ನು ಪುನರ್ ರಚಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಏಕಕಡತ ಪ್ರಸ್ತಾವನೆಯಲ್ಲಿ ಮಾರ್ಚ್ 8 2019ರಂದು ಆಚರಿಸಲಾದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳೆಯರ ಸರ್ವತ್ತೋಮುಖ ಅಭಿವೃದ್ಧಿಗಾಗಿ ಶ್ರಮಿಸಿರುವ ಸಂಘ ಸಂಸ್ಥೆಗಳಿಗೆ ಮತ್ತು ಕ್ರೀಡೆ, ಸಾಹಿತ್ಯ, ಶಿಕ್ಷಣ ಮತ್ತು ಕಲೆ ಮುಂತಾದ ವಿವಿಧ ಕ್ಷೇತ್ರಗಳಲ್ಲಿ ಅಸಾಧಾರಣಾ ಸಾಧನೆ ಮಾಡಿರುವ ಮಹಿಳೆಯರನ್ನು ಗುರುತಿಸಿ ಪ್ರೋತ್ಸಾಹಿಸಲು ರಾಜ್ಯ ಸರ್ಕಾರದಿಂದ ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಕೇಂದ್ರ ಸರ್ಕಾರದಿಂದ ನಾರೀಶಕ್ತಿ ಪ್ರಶಸ್ತಿಯನ್ನು ನೀಡಲಾಗುತ್ತಿದೆ.

993
26-2-19

402
28/2/19

ಸದರಿ ಪ್ರಶಸ್ತಿಗಳಿಗೆ ಸ್ವೀಕಾರವಾಗುವ ಪ್ರಸ್ತಾವನೆಗಳನ್ನು ಪರಿಶೀಲಿಸಲು, ಮೇಲೆ ಓದಲಾದ ಕ್ರಮ ಸಂಖ್ಯೆ 1–3ರವರೆಗೆ ವಿವರಿಸಲಾದಂತೆ ಆಯ್ಕೆ ಸಮಿತಿಯನ್ನು ರಚಿಸಲಾಗಿರುತ್ತದೆ. ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಯ ಆಯ್ಕೆ ಸಮಿತಿಯಲ್ಲಿನ ಸದಸ್ಯರಾದ ಶ್ರೀಮತಿ.ಸುಶೀಲಮ್ಮ, ಅಧ್ಯಕ್ಷರು, ಸುಮಂಗಲಿ ಸೇವಾಶ್ರಮ, ಬೆಂಗಳೂರು ಮತ್ತು ನಾರೀಶಕ್ತಿ ಆಯ್ಕೆ ಸಮಿತಿ ಸದಸ್ಯರಾದ ಶ್ರೀಮತಿ.ಲಕ್ಷ್ಮಿ ಹೆಬ್ಬಾಳ್ಕರ್ ಬೆಳಗಾವಿ ಮತ್ತು ಶ್ರೀಮತಿ ವಸುಂಧರಾ ಭೂಪತಿ ಇವರು, ಪ್ರಸ್ತಾಪಿತ ಸಮಿತಿಯಲ್ಲಿ ದೀರ್ಘಾವಧಿಯ ಸದಸ್ಯತ್ವವನ್ನು ಹೊಂದಿರುವುದರಿಂದ ಸದರಿ ಸದಸ್ಯರನ್ನು ಬದಲಾಯಿಸಿ ಈ ಕೆಳಗೆ ವಿವರಿಸಲಾದ, ಸಂಸ್ಥೆಯ ಮಹಿಳಾ ಮುಖ್ಯಸ್ಥರ ಪಟ್ಟಿಯಿಂದ ಆಯ್ಕೆ ಮಾಡಿ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಹಾಗೂ ನಾರೀಶಕ್ತಿ ಪುರಸ್ಕಾರ ಪ್ರಶಸ್ತಿ ನೀಡಲು ರಚಿಸಲಾಗಿದ್ದ ಸಮಿತಿಯನ್ನು ಪರಿಷ್ಕರಿಸುವಂತೆ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಇಲಾಖೆ ಇವರು ಸರ್ಕಾರವನ್ನು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

***ಆದೇಶ ಸಂಖ್ಯೆ: ಮಮಇ 27 ಮಮಅ 2019, ಬೆಂಗಳೂರು, ದಿನಾಂಕ: 22.02.2019.***

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದಿಂದ ನೀಡುವ ನಾರಿಶಕ್ತಿ ಪುರಸ್ಕಾರ ಮತ್ತು ರಾಜ್ಯ ಸರ್ಕಾರವು ನೀಡುವ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗಾಗಿ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಅರ್ಹ ಪ್ರಸ್ತಾವನೆಗಳನ್ನು ಪರಿಗಣಿಸಲು ಈ ಕೆಳಕಂಡಂತೆ ಆಯ್ಕೆ ಸಮಿತಿಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಮೂರು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಪರಿಷ್ಕರಿಸಿ ಹಾಗೂ ಪುನರ್‌ರಚಿಸಿ ಆದೇಶಿಸಿದೆ.

## ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಆಯ್ಕೆ ಸಮಿತಿಯ ಸದಸ್ಯರ ವಿವರ

| | | |
|---|---|---|
| 1. | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು | – ಅಧ್ಯಕ್ಷರು |
| 2. | ಸರ್ಕಾರದ ಅ.ಮು.ಕಾ/ಪ್ರ.ಕಾ/ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | – ಸದಸ್ಯರು |
| 3. | ಅಧ್ಯಕ್ಷರು, ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಮಂಡಳಿ | – ಸದಸ್ಯರು |
| 4. | ಅಧ್ಯಕ್ಷರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ | – ಸದಸ್ಯರು |
| 5. | ಅಧ್ಯಕ್ಷರು, ಕರ್ನಾಟಕ ರಾಜ್ಯ ಮಹಿಳಾ ಆಯೋಗ | – ಸದಸ್ಯರು. |
| 6. | ಶ್ರೀಮತಿ ಗೀತಾ ಮೆನನ್ Secretary Stree Jagruti Samiti | – ಸದಸ್ಯರು |
| 7. | ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | – ಸದಸ್ಯ ಕಾರ್ಯದರ್ಶಿ. |

## ನಾರಿಶಕ್ತಿ ಪುರಸ್ಕಾರ ಆಯ್ಕೆ ಸಮಿತಿಯ ಸದಸ್ಯರ ವಿವರ

| | | |
|---|---|---|
| 1. | ಸರ್ಕಾರದ ಅ.ಮು.ಕಾ/ಪ್ರ.ಕಾ/ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | – ಅಧ್ಯಕ್ಷರು |

2. ಪ್ರೊ: ಗಾಯತ್ರಿ ಕರ್ಣಂ, Center For Economic Studies & Policy – ಸದಸ್ಯರು.

3. ಶ್ರೀಮತಿ ಗೀತಾ ಮೆನನ್ Secretary Stree Jsgruti Samiti – ಸದಸ್ಯರು

4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ – ಸದಸ್ಯ ಕಾರ್ಯದರ್ಶಿ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂಧ್ಯಾ ಎಲ್.ನಾಯಕ್)
ಸರ್ಕಾರದ ಅಧೀನ ಕಾರ್ಯದರ್ಶಿ–1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

ಇವರಿಗೆ

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು–560 001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ವಾರ್ತಾ ಇಲಾಖೆ, ಇನ್ಫೆಂಟ್ರಿ ರಸ್ತೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿಗಮ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಬೆಂಗಳೂರು.
6. ಕಾರ್ಯದರ್ಶಿ ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಮಂಡಳಿ ಬೆಂಗಳೂರು.
7. ಆಯ್ಕೆ ಸಮಿತಿಯ ಸರ್ಕಾರೇತರ ಸದಸ್ಯರುಗಳಿಗೆ – (ನಿರ್ದೇಶನಾಲಯ ಮುಖಾಂತರ)
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವರದಕ್ಷಿಣೆ ನಿಷೇಧ ಕಾಯ್ದೆ, 1961 ರಡಿ ರಚಿಸಲಾದ ಜಿಲ್ಲಾ ಮಟ್ಟದ ಸಲಹಾ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ.

ಓದಲಾಗಿದೆ:

1. ಆದೇಶ ಸಂಖ್ಯೆ: ಮಮಇ 290 ಮಮಅ 2010, ದಿನಾಂಕ:04.12.2010.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಪತ್ರ ಸಂಖ್ಯೆ:ಮಮಅಇ/ ವಿಘ/ವನಿಕಾ/26/2013-14, ದಿನಾಂಕ:16.11.2013.

ಪ್ರಸ್ತಾವನೆ:-

ವರದಕ್ಷಿಣೆ ನಿಷೇಧ ಕಾಯ್ದೆ, 1961ರ ನಿಯಮ 8(ಬಿ) (4) ರ ಪ್ರಕಾರ ರಾಜ್ಯದ 30 ಜಿಲ್ಲೆಗಳಲ್ಲಿ ಜಿಲ್ಲಾ ಮಟ್ಟದ ಸಲಹಾ ಸಮಿತಿಯನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ಪುನರ್‌ರಚಿಸಲಾಗಿದೆ.

ಈ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಅವಧಿಯು ದಿನಾಂಕ:04.12.2013 ಕ್ಕೆ ಪೂರ್ಣಗೊಳ್ಳಲಿರುವುದರಿಂದ, ಸಲಹಾ ಸಮಿತಿಯನ್ನು ಪುನರ್ ರಚಿಸಲು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

## ಆದೇಶ ಸಂಖ್ಯೆ: ಮಮಇ 209 ಮಮಅ 2013, ಬೆಂಗಳೂರು, ದಿನಾಂಕ:08.01.2014.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ವರದಕ್ಷಿಣೆ ನಿಷೇಧ ಕಾಯ್ದೆ, 1961ರ ನಿಯಮ 8(ಬಿ) (4)ರ ಪ್ರಕಾರ ಜಿಲ್ಲಾ ಮಟ್ಟದ ಸಲಹಾ ಸಮಿತಿಯನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಮುಂದಿನ ಮೂರು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಈ ಕೆಳಕಂಡಂತೆ ಪುನರ್ ರಚಿಸಲಾಗಿದೆ:-

| | | |
|---|---|---|
| 1. | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2. | ಜಿಲ್ಲಾ ಪೊಲೀಸ್ ಅಧೀಕ್ಷಕರು | ಸದಸ್ಯರು |
| 3. | ಜಿಲ್ಲಾ ಸರ್ಕಾರಿ ವಕೀಲರು | ಸದಸ್ಯರು |
| 4. | ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿಗಳು | ಸದಸ್ಯರು |
| 5. | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಜಿಲ್ಲಾ ಉಪ ನಿರ್ದೇಶಕರು | ಸದಸ್ಯ ಕಾರ್ಯದರ್ಶಿ |
| 6. | ಇಬ್ಬರು ಮಹಿಳಾ ಸಮಾಜ ಕಾರ್ಯಕರ್ತರು | ಅಧಿಕಾರೇತರ ಸದಸ್ಯರು |

ಇಬ್ಬರು ಮಹಿಳಾ ಸಮಾಜ ಕಾರ್ಯಕರ್ತರನ್ನು ಸಮಿತಿಯ ಅಧ್ಯಕ್ಷರು ನಾಮ ನಿರ್ದೇಶನ ಮಾಡತಕ್ಕದ್ದು.

2...

ಆದೇಶ ಸಂಖ್ಯೆ:ಮಮಇ 197 ಮಮಅ 2002, ದಿನಾಂಕ:25.03.2003ರಲ್ಲಿ ನಮೂದಿಸಿರುವ ಕರ್ತವ್ಯಗಳನ್ನು ಸದರಿ ಸಮಿತಿಯು ನಿರ್ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಕೆ.ಜರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

ಇವರಿಗೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸಸೌಧ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನಸೌಧ, ಬೆಂಗಳೂರು.
5. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಅಧ್ಯಕ್ಷರು/ಸದಸ್ಯರು /ಸದಸ್ಯ ಕಾರ್ಯದರ್ಶಿ
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ:6 ನಿರ್ದೇಶಕರ ಮುಖಾಂತರ)

ಪ್ರತಿ:

1. ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

310

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ, ಬಾಲ್ಯ ವಿವಾಹ ನಿಷೇದ ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ರಚಿಸಲಾಗಿರುವ ಸಮಿತಿಗಳನ್ನು ವಿಲೀನಗೊಳಿಸಿ ಪುನರ್ ರಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ : ಮಮಇ 128 ಮಭಾಬ 2012, ದಿನಾಂಕ : 04.06.2013
2. ಸರ್ಕಾರದ ಆದೇಶ ಸಂಖ್ಯೆ : ಮಮಇ 105 ಮಮಅ 2013 ದಿನಾಂಕ:22.01.2014
3. ಸರ್ಕಾರದ ಆದೇಶ ಸಂಖ್ಯೆ : ಮಮಇ 201 ಮಭಾಬ 2013, ದಿನಾಂಕ : 18.09.2013
4. ಸರ್ಕಾರದ ಆದೇಶ ಸಂಖ್ಯೆ : ಮಮಇ 100 ಮಭಾಬ 2015, ದಿನಾಂಕ : 24.05.2016
5. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ:ಮಮಅಇ ಮಕ 55 2017-18, ದಿನಾಂಕ: 05.07.2019

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು ಮತ್ತು ಸಾಗಾಣಿಕೆಗೊಳಗಾದ ಮಹಿಳೆಯರ ರಕ್ಷಣೆ ಹಾಗೂ ಪುನರ್ವಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ದಿನಾಂಕ:28.06.2007ರಲ್ಲಿ ರಚಿಸಲಾಗಿದ್ದ ಸಮಿತಿಯನ್ನು ಪುನರ್ ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಬಾಲ್ಯ ವಿವಾಹ ನಿಷೇದ ಕೋರ್ ಕಮಿಟಿಯ ವರದಿಯನ್ವಯ ಬಾಲ್ಯ ವಿವಾಹಗಳನ್ನು ತಡೆಯಲು ಸಮರ್ಪಕವಾಗಿ ಕಾರ್ಯ ನಿರ್ವಹಿಸುವ ದೃಷ್ಟಿಯಿಂದ ರಾಜ್ಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಗಳನ್ನು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗಳನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3) ಮತ್ತು (4)ರ ಆದೇಶದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು ಮತ್ತು ಸಾಗಾಣಿಕೆಗೊಳಗಾದ ಮಹಿಳೆಯರ ರಕ್ಷಣೆ ಹಾಗೂ ಪುನರ್ವಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಪುನರ್ ರಚಿಸಲಾಗಿದ್ದ ಕೆಲವು ಅಂಶಗಳಿಗೆ ತಿದ್ದುಪಡಿ ಮಾಡಲಾಗಿದೆ.

ದಿನಾಂಕ:23.01.2018ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಕ್ಷೇತ್ರ ಮಟ್ಟದ ಸಮಿತಿಗಳ ಕಾರ್ಯ ನಿರ್ವಹಣೆ ಪರಿಶೀಲನೆ ಬಗ್ಗೆ ನಡೆದ ಸಭೆಯಲ್ಲಿ ಮಹಿಳೆಯರು ಮತ್ತು ಮಕ್ಕಳ

ಅನೈತಿಕ ಸಾಗಾಣಿಕೆ ತಡೆಗಟ್ಟಲು, ಬಾಲ್ಯ ವಿವಾಹಗಳನ್ನು ತಡೆಯಲು ಹಾಗೂ ಸಮಗ್ರ ಮಕ್ಕಳ ರಕ್ಷಣಾ ಸಮಿತಿಯನ್ನು ವಿಲೀನಗೊಳಿಸಿ ಒಂದೇ ಸಮಿತಿಯನ್ನು ರಚಿಸಲು ಸೂಚಿಸಲಾಗಿರುತ್ತದೆ. ಅದರಂತೆ ಮೂರು ಸಮಿತಿಗಳನ್ನು ವಿಲೀನಗೊಳಿಸಿ ಪರಿಷ್ಕರಿಸಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರು ಮೇಲೆ ಓದಲಾದ ಕ್ರಮ ಸಂಖ್ಯೆ(5)ರ ಪ್ರಸ್ತಾವನೆಯಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನ ಕೂಲಂಕುಷವಾಗಿ ಪರಿಶೀಲಿಸಿ ಪ್ರಸ್ತಾಪಿಸಲಾದ ಮೂರು ಸಮಿತಿಗಳನ್ನು ವಿಲೀನಗೊಳಿಸಿ ಸಮಿತಿಯನ್ನು ರಚಿಸಲು ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ : ಮಮಇ 48 ಮಮಅ 2018, ದಿನಾಂಕ :06.08.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ, ಬಾಲ್ಯ ವಿವಾಹ ನಿಷೇದ ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ರಚಿಸಲಾಗಿರುವ ಮಕ್ಕಳ ರಕ್ಷಣಾ ಸಮಿತಿಯನ್ನು ವಿಲೀನಗೊಳಿಸಿ ಈ ಕೆಳಕಂಡ ಸದಸ್ಯರನ್ನೊಳಗೊಂಡ **ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯನ್ನು** ರಚಿಸಿ ಆದೇಶಿಸಲಾಗಿದೆ.

| ಕ್ರ ಸಂ | ಸದಸ್ಯರು | ಪದನಾಮ |
|---|---|---|
| 1) | ಗ್ರಾಮ ಪಂಚಾಯತ್ ಅಧ್ಯಕ್ಷರು (ಮಹಿಳೆಯರು) | ಅಧ್ಯಕ್ಷರು |
| 2) | ಗ್ರಾಮ ಪಂಚಾಯತ್ ಉಪಾಧ್ಯಕ್ಷರು (ಮಹಿಳೆಯರು) ಮಹಿಳಾ ಉಪಾಧ್ಯಕ್ಷರಿದ್ದಲ್ಲಿ ಅವರನ್ನೇ ಸಮಿತಿಯ ಉಪಾಧ್ಯಕ್ಷರನ್ನಾಗಿ ನೇಮಿಸುವುದು, ಮಹಿಳಾ ಉಪಾಧ್ಯಕ್ಷರಿಲ್ಲದಿದ್ದಲ್ಲಿ ಮಹಿಳಾ ಸದಸ್ಯರನ್ನೇ ಉಪಾಧ್ಯಕ್ಷರನ್ನಾಗಿ ನೇಮಿಸುವುದು. | ಉಪಾಧ್ಯಕ್ಷರು |
| 3) | ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಎರಡು ಗ್ರಾಮ ಪಂಚಾಯತ್ ಸದಸ್ಯರು (ಕಡ್ಡಾಯವಾಗಿ ಒಬ್ಬರು ಮಹಿಳಾ ಸದಸ್ಯರು) | ಸದಸ್ಯರು |
| 4) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಳೀಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು (ತಾಲ್ಲೂಕು ಶಿಕ್ಷಣಾಧಿಕಾರಿಗಳು ಆಯ್ಕೆ ಮಾಡುವುದು) ಮುಖ್ಯೋಪಾಧ್ಯಾಯರು ಪುರುಷರಾಗಿದ್ದಲ್ಲಿ, ಮಹಿಳಾ ಶಿಕ್ಷಕರನ್ನು ಆಯ್ಕೆ ಮಾಡುವುದು. | ಸದಸ್ಯರು |
| 5) | ಗ್ರಾಮ ಲೆಕ್ಕಿಗರು (ಒಬ್ಬರನ್ನು ತಹಶೀಲ್ದಾರರು ನೇಮಿಸುವುದು) | ಸದಸ್ಯರು |
| 6) | ಎಲ್.ಎಚ್.ವಿ/ ಎ.ಎನ್.ಎಂ ಮತ್ತು ಆಶಾ ಕಾರ್ಯಕರ್ತೆ (ಎಲ್.ಎಚ್.ವಿ.ಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಎ.ಎನ್.ಎಂ.ಗಳನ್ನು ಹಾಗೂ ಆಶಾ ಕಾರ್ಯಕರ್ತೆಯನ್ನು ತಾಲ್ಲೂಕು ವೈದ್ಯಾಧಿಕಾರಿಗಳು ನಾಮ ನಿರ್ದೇಶನ ಮಾಡುವುದು) | ಸದಸ್ಯರು |
| 7) | ಬೀಟ್ ಪೋಲೀಸ್ ಅಧಿಕಾರಿ (ವೃತ್ತ ನಿರೀಕ್ಷಕರು ನಿಯೋಜಿಸುವುದು) | ಸದಸ್ಯರು |
| 8) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಿಡಿಎಸ್ ಮೇಲ್ವಿಚಾರಕಿ | ಸದಸ್ಯರು |

308

| | | |
|---|---|---|
| | (ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನೇಮಿಸುವುದು) | |
| 9) | ಆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಯ ಮಹಿಳಾ ಪ್ರತಿನಿಧಿ | ಸದಸ್ಯರು |
| 10) | ಅಂಗನವಾಡಿ ಕಾರ್ಯಕರ್ತೆ (ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಒಬ್ಬ ಅಂಗನವಾಡಿ ಕಾರ್ಯಕರ್ತೆಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನೇಮಿಸುವುದು) | ಸದಸ್ಯರು |
| 11) | ಸ್ತ್ರೀಶಕ್ತಿ ಸಂಘದ ಒಬ್ಬರು ಪ್ರತಿನಿಧಿ | ಸದಸ್ಯರು |
| 12) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರೌಢಶಾಲೆಯಲ್ಲಿ ಓದುತ್ತಿರುವ ಒಬ್ಬ ವಿದ್ಯಾರ್ಥಿ ಮತ್ತು ಒಬ್ಬ ವಿದ್ಯಾರ್ಥಿನಿ | ಸದಸ್ಯರು |
| 13) | ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯಿತಿ ಕಾರ್ಯದರ್ಶಿ | ಸದಸ್ಯ ಕಾರ್ಯದರ್ಶಿ |

ಗ್ರಾಮ ಸಭೆಯಲ್ಲಿ ಇಬ್ಬರು ಗ್ರಾಮ ಪಂಚಾಯತ್ ಸದಸ್ಯರು, ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ, ಸ್ತ್ರೀಶಕ್ತಿ ಸಂಘದ ಇಬ್ಬರು ಪ್ರತಿನಿಧಿ ವಿದ್ಯಾರ್ಥಿ, ವಿದ್ಯಾರ್ಥಿನಿಯರನ್ನು ಆಯ್ಕೆ ಮಾಡುವುದು ಹಾಗೂ ಸಮಿತಿಯಲ್ಲಿ ಶೇಕಡಾ50ರಷ್ಟು ಮಹಿಳಾ ಸದಸ್ಯರಿರುವಂತೆ ಕ್ರಮ ವಹಿಸುವುದು. ಸಮಿತಿ ಸಭೆಗಳಲ್ಲಿ ತೀರ್ಮಾನಿಸುವ ಎಲ್ಲಾ ಕಾರ್ಯಕ್ರಮಗಳು, ತೀರ್ಮಾನಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಸದಸ್ಯ ಕಾರ್ಯದರ್ಶಿಯದ್ದಾಗಿರುತ್ತದೆ. ಪ್ರತಿ ಮೂರು ತಿಂಗಳಿಗೊಮ್ಮೆ ಸಭೆಯನ್ನು ಏರ್ಪಡಿಸಿ ಚರ್ಚಿಸುವುದು.

ಸದರಿ ಸಮಿತಿ /ಸದಸ್ಯರ ಕಾರ್ಯ ಮತ್ತು ಜವಾಬ್ದಾರಿಗಳ ಬಗ್ಗೆ ಅನುಬಂಧ 1 ಮತ್ತು 2ರಲ್ಲಿ ವಿವರಿಸಲಾಗಿದ್ದು, ಅದರಂತೆ ಕಡ್ಡಾಯವಾಗಿ ಕಾರ್ಯ ನಿರ್ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಸಂಧ್ಯಾ ಎಲ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

ಇವರಿಗೆ :

1) ಪ್ರಧಾನ ಮಹಾಲೇಖಪಾಲರು, ಬೆಂಗಳೂರು
2) ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
3) ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು
4) ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
5) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು
6) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳಿಗೆ
7) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು

8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ಬೆಂಗಳೂರು
9) ಉಪ ನಿರ್ದೇಶಕರು, ಎನ್ ಎಂ ಸಿ ಝುನಿಕ ಭವನ, ಬೆಂಗಳೂರು
10) ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
11) ಎಲ್ಲ ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
12) ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
13) ಶಾಖಾ ರಕ್ಷಾ ಕಡತ

ಪ್ರತಿಯನ್ನು ಮಾಹಿತಿಗಾಗಿ : -

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು

308

## ಅನುಬಂಧ-1

**ಸರ್ಕಾರದ ಆದೇಶ ಸಂಖ್ಯೆ : ಮಮಇ 48 ಮಮಅ 2018, ದಿನಾಂಕ : 06.08.2019**

**ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಮಿತಿಯ ಜವಾಬ್ದಾರಿಗಳು .**

- ✓ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ 18 ವರ್ಷದೊಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದೊಳಗಿನ ಗಂಡು ಮಕ್ಕಳ ಮಾಹಿತಿ ಇಡಬೇಕು.
- ✓ ಪಂಚಾಯ್ತಿ ಕಛೇರಿ, ಶಾಲೆ, ಪೊಲೀಸ್, ಅಂಗನವಾಡಿ ಮಹಿಳಾ ಸ್ವಸಹಾಯ ಸಂಘಗಳು, ಯುವ ಸಂಘಟನೆಗಳು ಮಕ್ಕಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಬೇಕು.
- ✓ ಅನೈತಿಕ ಸಾಗಾಣಿಕೆಗೆ ಒಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ರಕ್ಷಣೆ ನೀಡುವುದು ಮತ್ತು ಅವರಿಗೆ ಹಾಗೂ ಅವರ ಕುಟುಂಬಗಳಿಗೆ ಆರ್ಥಿಕ, ನೈತಿಕ, ಸಾಮಾಜಿಕ, ವೈದ್ಯಕೀಯ ಹಾಗೂ ಶೈಕ್ಷಣಿಕ ಸಹಾಯವನ್ನು ಒದಗಿಸುವುದು.
- ✓ ಸಮುದಾಯದ ಎಲ್ಲರ ಭಾಗವಹಿಸುವಿಕೆಯೊಂದಿಗೆ ಸಾಗಾಣಿಕೆಯನ್ನು ನಿಷೇಧಿಸುವಲ್ಲಿ ಉಸ್ತುವಾರಿ ಮಾಡುವುದು.
- ✓ ಸಾಗಾಣಿಕೆ ತಡೆಯಲು ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳುವುದು. ಸಾಗಾಣಿಕೆ ತಡೆಯಲು ಪ್ರಚಾರಕ್ಕಾಗಿ ಮಾಹಿತಿ ಸಂಗ್ರಹಿಸಿ, ಉತ್ತಮವಾದ ಸಾಮಾಜಿಕ ವ್ಯವಸ್ಥೆಗಾಗಿ ಬೇಕಾದ ಸಂಪನ್ಮೂಲಗಳ ಕ್ರೋಢಿಕರಣಗೊಳಿಸುವುದು.
- ✓ ಮಕ್ಕಳ ಸಾಗಾಣಿಕೆ ವಿರುದ್ಧ ಶಾಲೆಗಳಲ್ಲಿ ಮಕ್ಕಳಿಗೆ ಅರಿವು ಮೂಡಿಸಬೇಕು.
- ✓ ಹೊಸ ವ್ಯಕ್ತಿಗಳು ಗ್ರಾಮಕ್ಕೆ ಆಗಮಿಸಿದ ಬಗ್ಗೆ ದಾಖಲೆ ಇಡಬೇಕು.
- ✓ ಗ್ರಾಮದಿಂದ ಕಾಣೆಯಾದ ಮಹಿಳೆಯರ ಮತ್ತು ಮಕ್ಕಳ ದಾಖಲೆ ಇಡಬೇಕು.
- ✓ ವಲಸೆ ಹೋದ ಕುಟುಂಬದ ಮಾಹಿತಿಯಿಡಬೇಕು ಮತ್ತು ಈ ಕುಟುಂಬದ ಬಗ್ಗೆ ಮೇಲ್ವಿಚಾರಣೆ ಮಾಡಬೇಕು
- ✓ ಬಾಲ್ಯ ವಿವಾಹ ನಿಷೇಧ, ದುಷ್ಪರಿಣಾಮಗಳು ಮತ್ತು ಬಾಲ್ಯ ವಿವಾಹ ನಿಷೇಧ ಕಾನೂನಿನ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು.
- ✓ ಗ್ರಾಮದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ಕೂಡಲೇ ಸಂಬಂಧಪಟ್ಟ ಬಾಲ್ಯ ವಿವಾಹ ನಿಷೇದಾಧಿಕಾರಿಗಳ ಗಮನಕ್ಕೆ ತಂದು ಎಫ್.ಐ.ಆರ್. ಒಳಗೊಂಡಂತೆ ಅಗತ್ಯ ಕ್ರಮ ಕೈಗೊಳ್ಳುವುದು.
- ✓ ಬೇಸಿಗೆ ರಜೆ ಅವಧಿ ಮುಗಿದ ನಂತರ ಶಾಲೆಗೆ ದಾಖಲಾದ/ದಾಖಲಾಗಬೇಕಾದ ಮಕ್ಕಳ ಸಮೀಕ್ಷೆ ನಡೆಸುವುದು.
- ✓ ಶಿಕ್ಷಣ ಇಲಾಖೆಯೊಂದಿಗೆ ಕೈಜೋಡಿಸಿ, ಶಾಲೆಯಿಂದ ಹೊರಗುಳಿದ ಮಕ್ಕಳ ಪೋಷಕರ ಮನವೊಲಿಸಿ, ಶಾಲೆಗೆ ಮರಳಿ ದಾಖಲಾಗುವ ಬಗ್ಗೆ ಕ್ರಮ ವಹಿಸುವುದು.
- ✓ ಗ್ರಾಮ ಸಭೆಗಳಲ್ಲಿ ಮಕ್ಕಳ ವಿದ್ಯಾಭ್ಯಾಸದ ಮಹತ್ವ, ವಿವಿಧ ಇಲಾಖೆಗಳಿಂದ ಸಿಗುವ ಸೌಲಭ್ಯ ಮುಂತಾದುವುಗಳನ್ನು ಸಾರ್ವಜನಿಕರ ಗಮನಕ್ಕೆ ತರುವುದು.
- ✓ ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಮಕ್ಕಳಿಗೆ ವಿವಿಧ ರೀತಿಯ ಕೌಶಲ್ಯ ತರಬೇತಿಯನ್ನು ನೀಡಲು ಕ್ರಮವಹಿಸುವುದು.
- ✓ ಉತ್ತಮ ಅಂಕಗಳನ್ನು ಪಡೆದ ಮಕ್ಕಳನ್ನು ಗ್ರಾಮಸಭೆಗಳಲ್ಲಿ ಪ್ರೋತ್ಸಾಹಿಸುವುದು.
- ✓ ಹೆಣ್ಣುಮಕ್ಕಳ ದಾಖಲಾತಿ ಹೆಚ್ಚಿರುವ ಶಾಲೆಗಳನ್ನು ಗುರುತಿಸಿ, ಗ್ರಾಮಸಭೆಗಳಲ್ಲಿ ಸನ್ಮಾನಿಸುವುದು.

303

- ✓ ಗ್ರಾಮಸಭೆಗಳ ಮೂಲಕ ಉತ್ತಮ ಶಿಕ್ಷಣ ತಜ್ಞರಿಂದ ವಿದ್ಯಾಭ್ಯಾಸದ ಮಹತ್ವದ ಕುರಿತು ಮಕ್ಕಳಿಗೆ ಮತ್ತು ಪೋಷಕರಿಗೆ ಅರಿವು ಮೂಡಿಸುವುದು.
- ✓ 7ನೇ ತರಗತಿಯಿಂದ 8ನೇ ತರಗತಿ ಹಾಗೂ 10ನೇ ತರಗತಿಯಿಂದ ಪಿ.ಯು.ಸಿ. ತರಗತಿಗಳಿಗೆ ಮಕ್ಕಳು ದಾಖಲಾಗುವಂತೆ ಸಮಿತಿಯ ಸದಸ್ಯರು ಖಚಿತಪಡಿಸಿಕೊಳ್ಳುವುದು.
- ✓ ಪಂಚಾಯತ್ ವ್ಯಾಪ್ತಿಯಲ್ಲಿ ಸರಕಾರಿ ಸೌಲಭ್ಯಗಳನ್ನು ನೀಡುವಾಗ ಫಲಾನುಭವಿಗಳಿಂದ ಅವರ ಕುಟುಂಬಗಳಲ್ಲಿ ಬಾಲಕಾರ್ಮಿಕತೆ ಅವಕಾಶವಿಲ್ಲದಂತೆ ಕರಾರು ಪತ್ರ ಬರೆಯಿಸಿಕೊಳ್ಳುವುದು.
- ✓ ಮಕ್ಕಳನ್ನು ದುಡಿಸುವ ಮಾಲೀಕರುಗಳಿಗೆ ಹಾಗೂ ಸಹಕರಿಸುವವರಿಗೂ ಕ್ರಮ ಜರುಗಿಸುವಂತೆ ಸಂಬಂಧಪಟ್ಟ ಇಲಾಖೆಗೆ ಮಾಹಿತಿ ನೀಡುವುದು.
- ✓ ಗ್ರಾಮ ಪಂಚಾಯತ್ ವ್ಯಾಪ್ತಿಯ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಗುಣಮಟ್ಟದ ಶಿಕ್ಷಣಕ್ಕಾಗಿ ಸಮುದಾಯದ, ಇಲಾಖೆಗಳ, ನಾಗರಿಕ ಸಂಘಸಂಸ್ಥೆಗಳ ಪಾಲುದಾರಿಕೆ, ಸಹಭಾಗಿತ್ವ, ಸಮನ್ವಯತೆ ಮತ್ತು ಹೊಣೆಗಾರಿಕೆ ಕುರಿತು ಕ್ರಮ ಕೈಗೊಳ್ಳುವುದು.
- ✓ ಪಂಚಾಯತ್ ಮಟ್ಟದಲ್ಲಿ ಯಾವುದೇ ರೈತರು, ಕಾರ್ಮಿಕರು ಮಕ್ಕಳನ್ನು ಹೊಲ, ಗದ್ದೆ, ಜೀತ ಸಂಬಳಕ್ಕೆ 18 ವರ್ಷದೊಳಗಿನ ಮಕ್ಕಳನ್ನು ದುಡಿಸದಂತೆ ಹಾಗೂ ದನ, ಕುರಿ, ಎಮ್ಮೆ ಮೇಯಿಸಲು ಮಕ್ಕಳನ್ನು ಬಳಸದಂತೆ ನಿರಂತರ ನಿಗಾವಹಿಸಿ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ನಿರಂತರ ಶಿಕ್ಷಣ ಒದಗಿಸಲು ಕ್ರಮ ಕೈಗೊಳ್ಳುವುದು.
- ✓ ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಘಡಗಳಿಗೆ 18 ವರ್ಷದೊಳಗಿನ ಮಕ್ಕಳು ಬಲಿಯಾಗದಂತೆ ರಕ್ಷಣೆ ನೀಡುವುದು ಹಾಗೂ ಈ ಕುರಿತು ಕ್ರಮ ಕೈಗೊಳ್ಳುವುದು.
- ✓ ಅನಾಥ/ಪೋಷಕರಿಗೆ ಬೇಡವಾದ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಕಲ್ಯಾಣ ಸಮಿತಿಗೆ ಮಾಹಿತಿ ನೀಡುವುದು ಅಲ್ಲದೆ, ಇಂತಹ ಪ್ರಕರಣಗಳನ್ನು ಮುಂಚಿತವಾಗಿ ಗುರುತಿಸಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು. ಸಂಕಷ್ಟದಲ್ಲಿರುವ ಮಹಿಳೆ/ಹೆಣ್ಣು ಮಕ್ಕಳು ಗರ್ಭಿಣಿಯಾದಾಗ ಇವರನ್ನು ನಿರಂತರವಾಗಿ ಅನುಸರಣೆ ಮಾಡುವುದು.
- ✓ ಮಕ್ಕಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳನ್ನು ಕೈಗೆತ್ತಿಕೊಂಡು ಸಮಸ್ಯೆಗಳನ್ನು ಬಗೆಹರಿಸುವುದು.
- ✓ ಲೈಂಗಿಕ ದೌರ್ಜನ್ಯಕ್ಕೊಳಗಾದ ಮಕ್ಕಳು ಕಂಡುಬಂದಲ್ಲಿ ಮಗುವಿಗೆ ರಕ್ಷಣೆ ನೀಡಿ ತಕ್ಷಣ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.
- ✓ ಕಡ್ಡಾಯವಾಗಿ ಮಕ್ಕಳ ಗ್ರಾಮಸಭೆ ನಡೆಸುವಂತೆ ಕ್ರಮ ವಹಿಸಿ ಸದರಿ ಸಭೆಯಲ್ಲಿ ಚರ್ಚಿಸಿದ ಅಂಶಗಳಿಗೆ ಕ್ರಮ ವಹಿಸುವುದು.
- ✓ ಮಕ್ಕಳಿಗೆ ಸಂಬಂಧಿಸಿದ ಸೂಕ್ತ ಯೋಜನೆಗಳಲ್ಲಿ ಅವಶ್ಯಕವಾದ ಸೌಲಭ್ಯ ಪರಿಹಾರ, ಪುನರ್ವಸತಿ ಮತ್ತು ಪರ್ಯಾಯ ವ್ಯವಸ್ಥೆಗಳನ್ನು ಆಯಾ ಇಲಾಖೆಗಳ ಅನುಸಾರವಾಗಿ ಮಕ್ಕಳಿಗೆ/ಕುಟುಂಬಗಳಿಗೆ ಒದಗಿಸುವುದು.
- ✓ ಗ್ರಾಮ ಪಂಚಾಯಿತಿಯ ಪ್ರತಿ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್/ಮೀನಾ ತಂಡ/ಮಕ್ಕಳ ಸುರಕ್ಷಾ ಸಮಿತಿಗಳ ಕಾರ್ಯ ವೈಖರಿಯ ಬಗ್ಗೆ ಮೇಲ್ವಿಚಾರಣೆ ಮಾಡುವುದು ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳುವುದು.

(ಸಂಧ್ಯಾ ಎಲ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

309

## ಅನುಬಂಧ-2

**ಸರ್ಕಾರದ ಆದೇಶ ಸಂಖ್ಯೆ : ಮಮಇ 48 ಮಮಅ 2018, ದಿನಾಂಕ : 06.08.2019**

**ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಮಿತಿಯ ಸದಸ್ಯರ ಜವಾಬ್ದಾರಿಗಳು.**

- 0 ಯಿಂದ 06 ವರ್ಷದೊಳಗಿನ ಎಲ್ಲಾ ಮಕ್ಕಳ ಮಾಹಿತಿಯನ್ನು ನಿರ್ವಹಿಸುವುದು.
- ಆರೋಗ್ಯ ಇಲಾಖೆಯ ಶುಶ್ರೂಷಕರು/ದಾದಿಗಳು/ಆಶಾ ಕಾರ್ಯಕರ್ತೆಯರೊಂದಿಗೆ ಗ್ರಾಮದಲ್ಲಿ ಆಗುವ ಪ್ರತಿಯೊಂದು ಜನನದ ಬಗ್ಗೆ ಗ್ರಾಮ ಲೆಕ್ಕಿಗರೊಂದಿಗೆ ಪರಿಶೀಲಿಸಿ, ಹೊಂದಾಣಿಕೆ ಮಾಡಿಕೊಳ್ಳುವುದು.
- ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು ಪಂಚಾಯತ್ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
- ವೃತ್ತ ಮೇಲ್ವಿಚಾರಕಿಯರಿಗೆ ಬಾಲ್ಯ ವಿವಾಹಗಳನ್ನು ಒಳಗೊಂಡಂತೆ ಮಾಹಿತಿಯನ್ನು ಪ್ರತಿ ತಿಂಗಳು ವರದಿ ಮಾಡತಕ್ಕದ್ದು. ಬಾಲ್ಯ ವಿವಾಹ ನಡೆಯುವ ಸಂದರ್ಭದಲ್ಲಿ ಗ್ರಾಮಲೆಕ್ಕಿಗರಿಗೆ ದೂರು ನೀಡುವುದು.

### ಎ.ಎನ್.ಎಮ್/ಆಶಾ ಕಾರ್ಯಕರ್ತೆಯರು

- ಗ್ರಾಮದಲ್ಲಿ ಜನಿಸಿದ ಮಕ್ಕಳ ನೋಂದಣಿಯನ್ನು ಗ್ರಾಮಲೆಕ್ಕಿಗರು ಮಾಡಿರುವ ಬಗ್ಗೆ ಖಾತ್ರಿ ಮಾಡಿಕೊಳ್ಳುವುದು.
- ಮಹಿಳೆಯರಿಗೆ ಮತ್ತು ಹದಿಹರೆಯದ ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹದಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳನ್ನು ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮದಲ್ಲಿ ಅರಿವು ಮೂಡಿಸುವುದು.
- ಬಾಲ್ಯ ವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಪೋಷಕರು/ ಮಕ್ಕಳು/ ಹಿರಿಯರೊಂದಿಗೆ ಸಮಾಲೋಚನೆ ನಡೆಸುವುದು. ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು.
- ತನ್ನ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡು ಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
- ಪ್ರತಿ 2 ತಿಂಗಳಿಗೊಮ್ಮೆ ಸಭೆಗಳಿಗೆ ಹಾಜರಾಗುವುದು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಅನುಪಾಲನೆ ಮಾಡುವುದು.
- ಪ್ರತಿ ತಿಂಗಳು ಮಾಹಿತಿಯನ್ನು ಮಹಿಳಾ ಆರೋಗ್ಯ ಸಂದರ್ಶಕರಿಗೆ ನೀಡುವುದು.
- ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಸಮಿತಿಯ ಗಮನಕ್ಕೆ ತರುವುದು.
- ಭಿಕ್ಷಾಟನೆ/ಬೀದಿ-ಚಿಂದಿ ಆಯುವ ಮಕ್ಕಳಿಗೆ ರಕ್ಷಣೆ ಒದಗಿಸಿ ಶಿಕ್ಷಣ ನೀಡುವಂತೆ ಕ್ರಮವಹಿಸುವುದು.
- ತನ್ನ ಕಾರ್ಯಕ್ಷೇತ್ರದಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಪೊಲೀಸ್ ಹಾಗೂ ಸಮಿತಿಯ ಗಮನಕ್ಕೆ ತರುವುದು.

- ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಗಡಗಳಿಗೆ 18 ವರ್ಷದೊಳಗಿನ ಮಕ್ಕಳು ಬಲಿಯಾಗದಂತೆ ರಕ್ಷಣೆ ಮಾಡಲು ಸಮಿತಿಯ ಗಮನಕ್ಕೆ ತರುವುದು.
- ಪಂಚಾಯಿತಿ ಮಟ್ಟದಲ್ಲಿ ಯಾವುದೇ ರೈತರು, ಕಾರ್ಮಿಕರು ಮಕ್ಕಳನ್ನು ದುಡಿಸದಂತೆ ಹಾಗೂ ದನ, ಕುರಿ, ಎಮ್ಮೆ ಮೇಯಿಸಲು ಬಳಸದಂತೆ ನಿರಂತರ ನಿಗಾವಹಿಸುವುದು.
- ಅನಾಥ/ಪೋಷಕರಿಗೆ ಬೇಡವಾದ ಮಕ್ಕಳು/ ಬೀದಿಯಲ್ಲಿ ಬಿಸಾಡಿದ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಕಲ್ಯಾಣ ಸಮಿತಿಗೆ ಮಾಹಿತಿ ನೀಡುವುದು ಅಲ್ಲದೆ, ಇಂತಹ ಪ್ರಕರಣಗಳನ್ನು ಮುಂಚಿತವಾಗಿ ಗುರುತಿಸಿ ಮಕ್ಕಳ ಸಹಾಯವಾಣಿ–1098 ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು.

- **ಪೋಲೀಸ್ ಅಧಿಕಾರಿ** : ಮಕ್ಕಳ ದೌರ್ಜನ್ಯ ಪ್ರಕರಣಗಳು ಬಂದಲ್ಲಿ ಎಫ್.ಐ.ಆರ್. ಮಾಡುವುದು ಮತ್ತು ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಸಮಿತಿಯವರೊಂದಿಗೆ ಚರ್ಚಿಸಿ ಕ್ರಮವಹಿಸುವುದು.

## ಮುಖ್ಯೋಪಾಧ್ಯಾಯರು / ಶಿಕ್ಷಕರು :

- ಮಗುವನ್ನು ಶಾಲೆಯಲ್ಲಿ ಉಳಿಸಿಕೊಳ್ಳಲು ಪ್ರಯತ್ನಿಸುವುದು.
- ಶಾಲೆ ಬಿಟ್ಟ ಮಕ್ಕಳ ಬಗ್ಗೆ ಅದರಲ್ಲೂ ಮುಖ್ಯವಾಗಿ ಋತುಮಾನದ ವಲಸೆಯಿಂದಾಗಿ ಶಾಲೆ ಬಿಡುವ ಮಕ್ಕಳ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಸಹಾಯದಿಂದ ಅನುಪಾಲನೆ ಮಾಡುವುದು.
- ಮಕ್ಕಳ ಗೈರು ಹಾಜರಿ ಬಗ್ಗೆ ನಿಗಾ ವಹಿಸುವುದು. ಮಗು 3 ದಿನಕ್ಕಿಂತ ಜಾಸ್ತಿ ದಿನಗಳ ಕಾಲ ಶಾಲೆಗೆ ಗೈರುಹಾಜರಾದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಸಹಾಯದಿಂದ ಅಂತಹ ಮಕ್ಕಳ ಪೋಷಕರನ್ನು ಭೇಟಿ ಮಾಡಿ ಮಗುವನ್ನು ವಾಪಸ್ ಶಾಲೆಗೆ ಕರೆಯಿಸುವ ಬಗ್ಗೆ ಕ್ರಮ ವಹಿಸುವುದು.
- ಸುತ್ತೋಲೆಯಲ್ಲಿರುವಂತೆ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್‌ಗಳನ್ನು ರಚಿಸುವುದು. ಮಕ್ಕಳನ್ನು ಬಾಲ್ಯ ವಿವಾಹದಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿಯಲು ಮತ್ತು ಬಾಲ್ಯ ವಿವಾಹ ನಡೆಸಿದಲ್ಲಿ ದೊರೆಯುವ ಶಿಕ್ಷೆಯ ಬಗ್ಗೆ ಅರಿವು ಮೂಡಿಸಲು ಸಕ್ರಿಯವಾಗಿ ಭಾಗವಹಿಸುವಂತೆ ಪ್ರೋತ್ಸಾಹಿಸುವುದು.
- ಶಾಲೆಯಲ್ಲಿ ಪ್ರತಿ ತಿಂಗಳು ಮೌಲ್ಯಧಾರಿತ ಶಿಕ್ಷಣದ ತರಗತಿಗಳನ್ನು ನಡೆಸುವ ಮೂಲಕ ಸಾಮಾಜಿಕ ಜವಾಬ್ದಾರಿಗಳನ್ನು ಉತ್ತೇಜಿಸುವುದು ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುವುದು.
- ಬಾಲ್ಯ ವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಪೋಷಕರು/ ಮಕ್ಕಳು/ ಹಿರಿಯರೊಂದಿಗೆ ಸಮಾಲೋಚನೆ ನಡೆಸುವುದು ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯ ವಿವಾಹ ತಡೆಯಲು ಸಹಕರಿಸುವುದು.
- ತನ್ನ ಕಾರ್ಯಕ್ಷೇತ್ರದಲ್ಲಿ ಯಾವುದೇ ಬಾಲ್ಯ ವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಸಮುದಾಯದಿಂದ ಬಾಲ್ಯ ವಿವಾಹದ ಬಗ್ಗೆ ಮಾಹಿತಿ ದೊರೆತ ತಕ್ಷಣ ಗ್ರಾಮದ ಗ್ರಾಮ ಲೆಕ್ಕಿಗರಿಗೆ ಮಾಹಿತಿ ನೀಡುವುದು. ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
- ಕ್ಷೇತ್ರ ಶಿಕ್ಷಣಾಧಿಕಾರಿಗೆ ಮೇಲಿನ ವಿಷಯಗಳನ್ವಯ ಪ್ರತಿ ತಿಂಗಳು ವರದಿ ಮಾಡುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

302

## ಗ್ರಾಮ ಲೆಕ್ಕಿಗರು

- ಅಂಗನವಾಡಿ ಕಾರ್ಯಕರ್ತೆಯರು/ ಎ.ಎನ್.ಎಮ್/ ಆಶಾ ಕಾರ್ಯಕರ್ತೆಯರುಗಳ ಸಹಕಾರದೊಂದಿಗೆ ಪ್ರತಿ ಗ್ರಾಮದಲ್ಲಿ ಜನಿಸುವ ಮಕ್ಕಳ ನೋಂದಣಿ ಮತ್ತು ಜನನ ಪ್ರಮಾಣ ಪತ್ರ ವಿತರಿಸುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ಸಾಮೂಹಿಕ ವಿವಾಹ/ ವೈಯುಕ್ತಿಕ ವಿವಾಹಗಳಲ್ಲಿ ಬಾಲ್ಯ ವಿವಾಹ ನಡೆಯುವ ಬಗ್ಗೆ ದೂರು ಬಂದಲ್ಲಿ ತಕ್ಷಣ ಸೂಕ್ತ ಕ್ರಮ ಕೈಗೊಂಡು, ಬಾಲ್ಯ ವಿವಾಹ ನಿಷೇಧ ಕಾಯ್ದೆಯನ್ವಯ ಬಾಲ್ಯ ವಿವಾಹ ತಡೆಯುವ ಬಗ್ಗೆ ಕ್ರಮ ವಹಿಸುವುದು.
- ಸಾಮೂಹಿಕ ವಿವಾಹಗಳು ನಡೆಯುವ ಸ್ಥಳದಲ್ಲಿ ಖುದ್ದು ಹಾಜರಿದ್ದು, ಯಾವುದೇ ಬಾಲ್ಯ ವಿವಾಹ ನಡೆಯದಂತೆ ಖಚಿತಪಡಿಸಿಕೊಳ್ಳುವುದು.
- ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಸಾಮೂಹಿಕ ವಿವಾಹ ನಡೆಯುವ ಸ್ಥಳಗಳಲ್ಲಿ ಪ್ರದರ್ಶಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು. ಫಲಕದಲ್ಲಿರುವ ಮಾಹಿತಿಯು ನಿಗದಿತ ಮಾರ್ಗ ಸೂಚಿಯಂತೆ ಇರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.
- ಬಾಲ್ಯ ವಿವಾಹಕ್ಕೆ ಸಂಬಂಧಿಸಿದ ಮಾಸಿಕ ಸಭೆಗಳಿಗೆ ತಪ್ಪದೇ ಹಾಜರಾಗುವುದು.
- ರಾಜಸ್ವ ನಿರೀಕ್ಷಕರು/ತಹಶೀಲ್ದಾರರಿಗೆ ಬಾಲ್ಯವಿವಾಹದ ಮಾಹಿತಿಯನ್ನು ಒಳಗೊಂಡಂತೆ ಪ್ರತಿ ತಿಂಗಳು ಮಾಹಿತಿ ನೀಡುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

## ಸಮಿತಿಯ ಸಭೆಗಳನ್ನು ಕರೆಯುವುದು

- ಸದರಿ ಸಮಿತಿಯು ಮೂರು ತಿಂಗಳಿಗೊಮ್ಮೆ ಸಭೆ ಸೇರತಕ್ಕದ್ದು.
- ಸಮಿತಿಯ ಸಭೆಯನ್ನು, ಸದಸ್ಯ ಕಾರ್ಯದರ್ಶಿಯು ಸಮಿತಿಯ ಅಧ್ಯಕ್ಷರೊಂದಿಗೆ ಸಮಾಲೋಚಿಸಿ, ನಿಗಧಿಪಡಿಸಬಹದಾದಂತಹ ದಿನಗಳಂದು ಮತ್ತು ಸಮಯದಲ್ಲಿ ನಡೆಸತಕ್ಕದ್ದು.
- ಸದಸ್ಯ ಕಾರ್ಯದರ್ಶಿಯು ಪ್ರತಿಯೊಂದು ಸಭೆಯ ಬಗ್ಗೆ ಸದಸ್ಯರಿಗೆ ಕನಿಷ್ಠ 3 ದಿನಗಳ ಮೊದಲು ಸಭಾ ಸೂಚನೆಯಯನ್ನು ಉದ್ದೇಶಿತ ಕಾರ್ಯಸೂಚಿಯೊಂದಿಗೆ ನೀಡತಕ್ಕದ್ದು.
- ಸದಸ್ಯ ಕಾರ್ಯದರ್ಶಿಯು ಒಂದು ದಿನದ ಮೊದಲು ನೋಟೀಸನ್ನು ನೀಡುವ ಮೂಲಕ ತುರ್ತು ಸಭೆಯನ್ನು ಕರೆಯಬಹುದು.
- ಸಭೆಯ ಕೋರಂ ಅಧ್ಯಕ್ಷರು ಸೇರಿದಂತೆ ಒಟ್ಟು ಸದಸ್ಯರಲ್ಲಿ ಶೇಕಡ 50ಕ್ಕಿಂತ ಹೆಚ್ಚಿನ ಸದಸ್ಯರು ಸಭೆಯಲ್ಲಿ ಹಾಜರಿರತಕ್ಕದ್ದು.
- ಕೋರಂ ಕೊರತೆಯಿಂದಾಗಿ ಸಭೆಯನ್ನು ನಡೆಸಲಾಗದಿದ್ದಲ್ಲಿ, ಸದರಿ ದಿನಾಂಕದಿಂದ 4 ದಿನಗಳ ಒಳಗೆ ಮತ್ತೊಂದು ದಿನಕ್ಕೆ ಸದಸ್ಯ ಕಾರ್ಯದರ್ಶಿಯು ಸಭೆಯನ್ನು ನಿಗಧಿಪಡಿಸತಕ್ಕದ್ದು. ನಿಗಧಿಪಡಿಸಲ್ಪಟ್ಟ ಸಭೆಯೂ ಸಹ ಅಗತ್ಯ ಕೋರಂ ಹೊಂದಿರದಿದ್ದಲ್ಲಿ, ಆಗ ವಾಸ್ತವವಾಗಿ ಹಾಜರಿರುವ ಸದಸ್ಯರ ಕೋರಂ ಸಾಕಾಗುತ್ತದೆ.
- ಅಧ್ಯಕ್ಷರ ಗೈರು ಹಾಜರಿದ್ದಲ್ಲಿ ತುರ್ತು ಸಭೆಯನ್ನು ಕರೆಯಬೇಕಾದ ಸಂದರ್ಭವಿದ್ದಲ್ಲಿ, ಉಪಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಭೆಯನ್ನು ಏರ್ಪಡಿಸುವುದು.

(ಸಂಧ್ಯಾ ಎಲ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ
ದೂರವಾಣಿ ಸಂಖ್ಯೆ : 080 - 2235 2931

G-wo 1920127
17-11-20

File No.WCDSEC/87/SWW/2020-WCD_SEC_A-WOMEN AND CHILD WELFARE SEC

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ಭಾಗ್ಯಲಕ್ಷ್ಮಿ" ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಬದಲು ಅಂಚೆ ಇಲಾಖೆ ಮೂಲಕ "ಸುಕನ್ಯಾ ಸಮೃದ್ಧಿ ಖಾತೆ ಯೋಜನೆ" ಯಂತೆ ಮರು ವಿನ್ಯಾಸಗೊಳಿಸಿ 2020-21ನೇ ಸಾಲಿನಿಂದ ಮುಂದುವರೆಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಮಮಇ 99 ಮಮಅ 2006, ದಿನಾಂಕ: 17.10.2006
2. ಸರ್ಕಾರಿ ಆದೇಶ ಸಂಖ್ಯೆ: ಮಮಇ 69 ಮಮಅ 2019, ದಿನಾಂಕ: 09.01.2020
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ.ಆಇ 52 ವೆಚ್ಚ -10/2020 ದಿನಾಂಕ:11.05.2020
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕ ಕಡತ ಸಂ:ಮಮಅಇ/ಮಕ/ ಭಾಯೋ/ ಸುಸಯೋ/01/2020-21, ದಿನಾಂಕ: 06.06.2020

ನಿರ್ದೇಶನಾಲಯ
13 NOV 2020

ಪ್ರಸ್ತಾವನೆ:

ಮೇಲಿನ ಕ್ರಮಾಂಕ (1)ರಲ್ಲಿ ಓದಲಾದ ದಿನಾಂಕ:17.10.2006ರ ಸರ್ಕಾರದ ಆದೇಶದಲ್ಲಿ ಹೆಣ್ಣು ಮಗುವಿನ ಸ್ಥಾನವನ್ನು ಕುಟುಂಬ ಹಾಗೂ ಸಮುದಾಯದಲ್ಲಿ ಹೆಚ್ಚಿಸಲು ರಾಜ್ಯ ಸರ್ಕಾರವು "ಭಾಗ್ಯಲಕ್ಷ್ಮಿ" ಎಂಬ ವಿನೂತನ ಯೋಜನೆಯನ್ನು, ಪಾಲುದಾರ ಹಣಕಾಸು ಸಂಸ್ಥೆಯಾದ "ಭಾರತೀಯ ಜೀವ ವಿಮಾ ನಿಗಮದ" ಸಹಭಾಗಿತ್ವದೊಂದಿಗೆ ಅನುಷ್ಠಾನಗೊಳಿಸಲು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ನಿಯಮ 4(ಜಿ) ಅಡಿ ವಿನಾಯಿತಿ ಪಡೆದು ಅನುಮೋದನೆ ನೀಡಲಾಗಿದೆ.

ಮೇಲಿನ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ:09.01.2020ರ ಸರ್ಕಾರದ ಆದೇಶದಲ್ಲಿ ಭಾಗ್ಯಲಕ್ಷ್ಮಿ ಯೋಜನೆಯನ್ನು ದಿನಾಂಕ: 01.04.2019 ರಿಂದ 31.03.2020 ರವರೆಗೆ ಮುಂದುವರೆಸಲು ಮತ್ತು ಈ ಯೋಜನೆಗೆ ಭಾರತೀಯ ಜೀವ ವಿಮಾ ನಿಗಮವನ್ನು ಪಾಲುದಾರ ಹಣಕಾಸು ಸಂಸ್ಥೆಯಾಗಿ ಮುಂದುವರೆಸಲು ಮಂಜೂರಾತಿ ನೀಡಲಾಗಿದೆ.

ಮೇಲಿನ ಕ್ರಮಾಂಕ (3)ರಲ್ಲಿ ಓದಲಾದ ದಿನಾಂಕ:11.05.2020ರ ಅನಧಿಕೃತ ಟಿಪ್ಪಣಿಯಲ್ಲಿ ಭಾಗ್ಯಲಕ್ಷ್ಮಿ ಯೋಜನೆಯನ್ನು 2020-21ನೇ ಸಾಲಿನಿಂದ ಭಾರತೀಯ ಜೀವ ವಿಮಾ ನಿಗಮದ ಬದಲು ಅಂಚೆ ಇಲಾಖೆ ಜೊತೆ ಒಪ್ಪಂದ ಮಾಡಿಕೊಂಡು ಮರು ವಿನ್ಯಾಸಗೊಳಿಸಿ ಜಾರಿಗೆ ತರಲು ತೀರ್ಮಾನಿಸಲಾಗಿದೆ.

ಮೇಲಿನ ಕ್ರಮಾಂಕ (4)ರಲ್ಲಿ ಓದಲಾದ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರ ಏಕ ಕಡತದಲ್ಲಿ ಭಾಗ್ಯಲಕ್ಷ್ಮಿ ಯೋಜನೆಯನ್ನು 2020-21ನೇ ಸಾಲಿನಿಂದ ಭಾರತೀಯ ಜೀವ ವಿಮಾ ನಿಗಮದ ಬದಲು ಅಂಚೆ ಇಲಾಖೆ ಜೊತೆ ಒಪ್ಪಂದ ಮಾಡಿಕೊಂಡು ಮರು ವಿನ್ಯಾಸಗೊಳಿಸಿ ಜಾರಿಗೆ ತರುವ ಕುರಿತು ಸರ್ಕಾರದ ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ.

ಪ್ರಸ್ತುತ ಭಾಗ್ಯಲಕ್ಷ್ಮಿ ಯೋಜನೆಯಡಿ ಇರುವ ಮಾನದಂಡಗಳು ಹಾಗೂ ಸುಕನ್ಯಾ ಸಮೃದ್ಧಿ ಖಾತೆ ಯೋಜನೆಯ ಪ್ರಮುಖ ಮಾನದಂಡಗಳೆರಡನ್ನು ಪುನರ್ ಪರಿಶೀಲಿಸಿ, 2020-21ನೇ ಸಾಲಿನಿಂದ ಹಿಂದಿನ ಪಾಲುದಾರ ಹಣಕಾಸು ಸಂಸ್ಥೆಯಾದ ಜೀವ ವಿಮಾ ನಿಗಮದ ಬದಲು ಅಂಚೆ ಇಲಾಖೆಯ ಸುಕನ್ಯಾ ಸಮೃದ್ಧಿ ಖಾತೆ ಯೋಜನೆ ಮೂಲಕ ಭಾಗ್ಯಲಕ್ಷ್ಮಿ ಯೋಜನೆಯನ್ನು ಜಾರಿಗೊಳಿಸಲು ಮರು ವಿನ್ಯಾಸಗೊಳಿಸಿದೆ.

ಭಾಗ್ಯಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳ ಯೋಜನೆಯನ್ನು ಮಾರ್ಪಾಡು ಮಾಡಿ ಸುಕನ್ಯಾ ಸಮೃದ್ಧಿ ಖಾತೆ ಯೋಜನೆಯಡಿ ತಂದಲ್ಲಿ ಪ್ರತಿ ಫಲಾನುಭವಿಯ ಹೆಸರಿನಲ್ಲಿ ರೂ.3,000/- ದಂತೆ ಠೇವಣಿ ಹೂಡಲು, ಅಂದಾಜು 1,50,000 ಫಲಾನುಭವಿಗಳಿಗೆ ಒಂದು ವರ್ಷಕ್ಕೆ ರೂ.45.00ಕೋಟಿ ಅನುದಾನದ ಅವಶ್ಯಕತೆ ಇದೆ.

2020-21ನೇ ಸಾಲಿನಿಂದ ಭಾಗ್ಯಲಕ್ಷ್ಮಿ ಯೋಜನೆಯನ್ನು ಮರುವಿನ್ಯಾಸಗೊಳಿಸಿ ಸುಕನ್ಯಾ ಸಮೃದ್ಧಿ ಖಾತೆ ಯೋಜನೆ ಮೂಲಕ ಅನುಷ್ಠಾನಗೊಳಿಸಲು, ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಅಗತ್ಯ ಕ್ರಮಗಳನ್ನು ಕೈಗೊಂಡು ಭಾಗ್ಯಲಕ್ಷ್ಮಿ ಯೋಜನೆಯನ್ನು 2020–21ನೇ ಸಾಲಿಗೆ ಮುಂದುವರೆಸುವ ಸಂಬಂಧ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಮಮಇ 87 ಮಮಅ 2020, ಬೆಂಗಳೂರು ದಿನಾಂಕ:10.11.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಭಾಗ್ಯಲಕ್ಷ್ಮಿ" ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಬದಲು ಅಂಚೆ ಇಲಾಖೆ ಮೂಲಕ "ಸುಕನ್ಯಾ ಸಮೃದ್ಧಿ ಖಾತೆ ಯೋಜನೆ" ಯಂತೆ ಮರು ವಿನ್ಯಾಸಗೊಳಿಸಿ 2020-21ನೇ ಸಾಲಿನಿಂದ ಈ ಕೆಳಕಂಡ ಅಂಶಗಳಂತೆ ಮುಂದುವರೆಸಲು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

1. ಯೋಜನೆಯ ಹೆಸರನ್ನು "ಭಾಗ್ಯಲಕ್ಷ್ಮಿ ಯೋಜನೆ" ಎಂದೇ ಮುಂದುವರಿಸಿ, ಅಂಚೆ ಇಲಾಖೆಯ "ಸುಕನ್ಯಾ ಸಮೃದ್ಧಿ ಖಾತೆ ಯೋಜನೆಯ" ಮೂಲಕ ಅನುಷ್ಠಾನಗೊಳಿಸುವುದು;

2. ಬಿಪಿಎಲ್ ಕುಟುಂಬದ ಮೊದಲ ಎರಡು ಹೆಣ್ಣು ಮಕ್ಕಳ ಹೆಸರಿನಲ್ಲಿ ವರ್ಷಕ್ಕೆ ಪ್ರತಿ ಮಗುವಿಗೆ ರೂ. 3000.00 ದಂತೆ, 15 ವರ್ಷಗಳವರೆಗೆ ಠೇವಣಿ ಇಡುವುದು. ಅಂದಾಜು ಪರಿಪಕ್ವ ಮೊತ್ತವು ರೂ. 1,27,593.00 ಗಳಾಗುತ್ತದೆ;

3. ಖಾತೆಯು ಪ್ರಾರಂಭವಾದ ದಿನಾಂಕದಿಂದ 21 ವರ್ಷಗಳ ಅವಧಿಗೆ ಖಾತೆಯು ಪೂರ್ಣಗೊಳ್ಳುತ್ತದೆ. ಖಾತೆದಾರರು 18 ವರ್ಷ ಪೂರ್ಣಗೊಂಡ ನಂತರ ಅವಶ್ಯ ದಾಖಲೆಗಳನ್ನು ಒದಗಿಸುವ ಮೂಲಕ, ಖಾತೆಯನ್ನು ಸ್ವತ: ನಿರ್ವಹಿಸಬಹುದಾಗಿದೆ;

4. ಖಾತೆದಾರರು, 21 ವರ್ಷ ತುಂಬುವ ಮೊದಲೇ, ಉದ್ದೇಶಿತ ಮದುವೆಯ ಹಿನ್ನೆಲೆಯಲ್ಲಿ, ಮದುವೆಯ ಸಂದರ್ಭದಲ್ಲಿ ಖಾತೆದಾರರ ವಯಸ್ಸು 18 ವರ್ಷಕ್ಕಿಂತ ಕಡಿಮೆ ಇರಲ್ಲಿಲ್ಲವೆಂದು, ಛಾಪಾ ಕಾಗದದಲ್ಲಿ ನೋಟರಿಯವರಿಂದ ಧೃಢೀಕರಿಸಿದ ಘೋಷಣಾ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸುವ ಮೂಲಕ ಖಾತೆಯನ್ನು ಮುಕ್ತಾಯಗೊಳಿಸಬಹುದಾಗಿದೆ;

5. ಉನ್ನತ ಶಿಕ್ಷಣದ ಉದ್ದೇಶಕ್ಕಾಗಿ, ಅರ್ಜಿ ಸಲ್ಲಿಸಿದ ಆರ್ಥಿಕ ವರ್ಷದ ಹಿಂದಿನ ವರ್ಷದ ಕೊನೆಯಲ್ಲಿ, ಸುಕನ್ಯ ಸಮೃದ್ಧಿ ಖಾತಾ ಯೋಜನೆಯಲ್ಲಿ ಇರುವ ಮೊತ್ತದ ಗರಿಷ್ಠ ಶೇ:50 ರಷ್ಟು ಮೊತ್ತವನ್ನು ಖಾತೆದಾರರು ಹಿಂಪಡೆದುಕೊಳ್ಳಲು ಅವಕಾಶವಿರುತ್ತದೆ. ಸದರಿ ಹಿಂಪಡೆದುಕೊಳ್ಳುವಿಕೆಗೆ. ಖಾತೆದಾರರು ಅರ್ಜಿ ಸಲ್ಲಿಸಿದ ದಿನಾಂಕಕ್ಕೆ, 18 ವರ್ಷ ಪೂರ್ಣಗೊಂಡಿರಬೇಕು ಅಥವಾ 10ನೇ ತರಗತಿ ತೇರ್ಗಡೆಯಾಗಿರಬೇಕು (ಇದರಲ್ಲಿ ಯಾವುದು ಮೊದಲೋ ಅದು). ಈ ಹಿಂಪಡೆದುಕೊಳ್ಳುವಿಕೆಯನ್ನು, ವರ್ಷಕ್ಕೆ ಒಂದು ಬಾರಿ ಮೀರದಂತೆ, ಗರಿಷ್ಟ 5 ವರ್ಷಗಳಿಗೆ, ಗರಿಷ್ಟ ಮೊತ್ತದ ಮಿತಿ ಮೀರದಂತೆ, ಒಂದು ದೊಡ್ಡ ಮೊತ್ತದಲ್ಲಿ (lump sum) ಅಥವಾ ಕಂತುಗಳಲ್ಲಿ ಹಿಂಪಡೆಯಬಹುದು. ಶಿಕ್ಷಣ ಸಂಸ್ಥೆಯು ಪ್ರವೇಶದ ಪ್ರಸ್ತಾಪದಲ್ಲಿ (offer of admission) ಅಥವಾ ಶುಲ್ಕ-ರಶೀದಿಯಲ್ಲಿ ನಮೂದಿಸಿರುವಂತೆ, ಪ್ರವೇಶಕ್ಕೆ ವಾಸ್ತವವಾಗಿ ಅವಶ್ಯಕತೆ ಇರುವ ಶುಲ್ಕ ಮತ್ತು ಇತರೆ ಶುಲ್ಕಗಳ ಮೊತ್ತಕ್ಕೆ ಹಿಂಪಡೆಯುವ ಮೊತ್ತವನ್ನು ಸೀಮಿತಗೊಳಿಸಲಾಗುತ್ತದೆ;

6. ಫಲಾನುಭವಿಗಳ ವಿವರ ಮತ್ತು ಹಣ ಪಾವತಿ ತಂತ್ರಾಂಶದಲ್ಲಿ ಅಳವಡಿಕೆಯಾಗುವುದರಿಂದ, ಪೋಷಕರೇ ಪಾಸ್ ಬುಕ್ ಪಡೆದು ನಿರ್ವಹಿಸಬಹುದಾಗಿದೆ ಹಾಗೂ ಪಾಸ್ ಬುಕ್ ಕಳೆದುಹೋದರೆ ನಕಲಿ ಪಾಸ್ ಬುಕ್ ಅನ್ನು ಪೋಷಕರೇ ಪಡೆಯಬಹುದಾಗಿದೆ;

7. ಭಾಗ್ಯಲಕ್ಷ್ಮಿ ಯೋಜನೆ ಅರ್ಜಿ ಹಾಗೂ ಸುಕನ್ಯ ಸಮೃದ್ಧಿ ಖಾತೆ ಯೋಜನೆ ಅರ್ಜಿಗಳಲ್ಲಿ ಸಾಮಾನ್ಯವಾಗಿ. ಇರುವ ಅಂಶಗಳನ್ನು ಹೊರತುಪಡಿಸಿ ಅಗತ್ಯವಿರುವ ಹೆಚ್ಚುವರಿ ಅಂಶಗಳನ್ನು ಸೇರ್ಪಡೆ ಮಾಡಿಕೊಂಡು ಅನುಷ್ಠಾನಗೊಳಿಸಲು ಅಗತ್ಯವಿರುವ ತಂತ್ರಾಂಶವನ್ನು ಎನ್ಐಸಿ ಸಂಸ್ಥೆಯ ಮೂಲಕ ಸಿದ್ಧಪಡಿಸಲಾಗುವುದು;

8. ಭಾಗ್ಯಲಕ್ಷ್ಮಿ ಯೋಜನೆಯನ್ನು ಸುಕನ್ಯ ಸಮೃದ್ಧಿ ಖಾತೆ ಯೋಜನೆ ಮೂಲಕ ಅನುಷ್ಠಾನಗೊಳಿಸಲು ಫಲಾನುಭವಿಗಳಿಗೆ ಪ್ರತ್ಯೇಕ ಬಾಂಡ್ ಮಾದರಿ ಪ್ರಮಾಣ ಪತ್ರ ನೀಡಲು ಹಾಗೂ ಇನ್ನಿತರ ಆಡಳಿತ ವೆಚ್ಚವನ್ನು ಪಾವತಿಸಲು ಪ್ರಸ್ತಾವನೆಯನ್ನು ಅಂಚೆ ಇಲಾಖೆಯಿಂದ ಪಡೆದು, ಆರ್ಥಿಕ ಇಲಾಖೆಯ ಸಹಮತಿಯೊಂಂದಿಗೆ ಕಾರ್ಯಗತಗೊಳಿಸುವುದು.

9. ಫಲಾನುಭವಿ ಮರಣ ಹೊಂದಿದಲ್ಲಿ, ಮೊತ್ತವನ್ನು ಪೋಷಕರಿಗೆ ನೀಡುವುದು.

10. ಭಾಗ್ಯಲಕ್ಷ್ಮಿ ಯೋಜನೆಯನ್ನು ಸುಕನ್ಯ ಸಮೃದ್ಧಿ ಖಾತೆ ಯೋಜನೆ ಮೂಲಕ ಅನುಷ್ಠಾನಗೊಳಿಸಲು ಅಗತ್ಯವಿರುವ ಅಂಶಗಳ ಕುರಿತು ಅಂಚೆ ಕಛೇರಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ನಡುವೆ. ಕರಾರು ಒಪ್ಪಂದ (MOU) ಮಾಡಿಕೊಳ್ಳುವುದು.

11. ಭಾಗ್ಯಲಕ್ಷ್ಮಿ ಯೋಜನೆಯಲ್ಲಿ ಅಳವಡಿಸಲಾಗಿರುವ ಇನ್ನಿತರೆ ಕಾರ್ಯವಿಧಾನಗಳನ್ನು ಮುಂದುವರೆಸುವುದು.

ಈ ಯೋಜನೆಗೆ ತಗಲುವ ವೆಚ್ಚವನ್ನು 2020-21ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2235-02-102-0-205 (100, 422, 423) ಅಡಿಯಲ್ಲಿ ಭರಿಸಲಾಗುವುದು.

ಈ ಆದೇಶವನ್ನು ಸಚಿವ ಸಂಪುಟ ಸಭೆಯ ನಿರ್ಣಯದ ಟಿಪ್ಪಣಿ ಸಂಖ್ಯೆ:ಸಿ-499/2020, ದಿನಾಂಕ: 22.10.2020ರಲ್ಲಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 197 ವೆಚ್ಚ-10/2020, ದಿನಾಂಕ: 03.07.2020ರಲ್ಲಿ ನೀಡಿದ ಸಹಮತದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

G.H. Sarojamma 10/11/2020
(ಜಿ ಹೆಚ್ ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ)
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

ಇವರಿಗೆ,

1. ಪ್ರಧಾನ ಮಹಾಲೇಖಪಾಲರು (ಎ ಆಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ:5329, ಬೆಂಗಳೂರು-560 001.
2. ಆಯುಕ್ತರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ (ಪ್ರಕರಣ ಸಂಖ್ಯೆ: ಸಿ–499/2020, ದಿನಾಂಕ: 22.10.2020), ವಿಧಾನಸೌಧ, ಬೆಂಗಳೂರು
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ–10, ವಿಧಾನಸೌಧ, ಬೆಂಗಳೂರು.
6. ಚೀಫ್ ಪೋಸ್ಟ್ ಮಾಸ್ಟರ್ , ಪ್ರಧಾನ ಅಂಚೆ ಇಲಾಖೆ, ಬೆಂಗಳೂರು - 01.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ಯೋಜನೆಯನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರಿ ಆದೇಶ ಸಂ:ಮಮಇ 169 ಮಮಅ 2007, ದಿನಾಂಕ:21.08.2007.
2. ಸರ್ಕಾರಿ ಆದೇಶ ಸಂ:ಮಮಇ 169 ಮಮಅ 2007, ದಿನಾಂಕ:03.10.2007.
3. ಸರ್ಕಾರಿ ಆದೇಶ ಸಂ:ಮಮಇ 91 ಮಮಅ 2016, ದಿನಾಂಕ:01.07.2016.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕ ಕಡತ ಸಂ:ಮಮಅಇ/ಮಕ/39/2016-17 ದಿನಾಂಕ:25.12.2016.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು 2007-08ನೇ ಸಾಲಿನಿಂದ ಮಾರ್ಪಡಿಸಿ ಭಾರತ ಸರ್ಕಾರದ ಮಾರ್ಗಸೂಚಿಯಂತೆ ಕಲೆ, ಶಿಕ್ಷಣ, ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ತೋರಿರುವ ಮಕ್ಕಳನ್ನು ಕೂಡ ರಾಜ್ಯಮಟ್ಟದಲ್ಲಿ ಆಯ್ಕೆ ಮಾಡಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 05.06.2007 ರ ಆದೇಶ ಸಂ:ಮಮಇ 66 ಮಭಾಬ 2007 ರಲ್ಲಿ ರಚಿತವಾದ ಸಮಿತಿಯ ಅನುಮೋದನ ಯೊಂದಿಗೆ ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ರೀತಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಈ ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ಷೇತ್ರಕ್ಕೆ/ಜಿಲ್ಲೆಗೆ ಇಬ್ಬರಂತೆ ಒಟ್ಟು 224 ಮಕ್ಕಳನ್ನು ಆಯ್ಕೆ ಮಾಡಿ ರಾಜ್ಯ ಮಟ್ಟದಲ್ಲಿ ರೂ.10,000/- ನಗದು ಒಳಗೊಂಡಿರುವ ಪ್ರಶಸ್ತಿಯನ್ನು ಆಯಾ ಜಿಲ್ಲೆಗಳಲ್ಲಿ ನೀಡಲು ಹಾಗೂ ಮಾರ್ಪಡಿಸಿದ ಯೋಜನೆಯ ಜಾರಿಗಾಗಿ ಶೇ.2 ಆಡಳಿತಾತ್ಮಕ ವೆಚ್ಚವನ್ನು ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು ದಿನಾಂಕ:21.08.2007ರ ಸರ್ಕಾರಿ ಆದೇಶವನ್ನು ಭಾಗಶಃ ಪರಿಷ್ಕರಿಸಿ 2007-08ನೇ ಸಾಲಿನಿಂದ ಭಾರತ ಸರ್ಕಾರದ ಮಾರ್ಗಸೂಚಿಯಂತೆ ಕಲೆ, ಶಿಕ್ಷಣ, ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ತೋರಿರುವ 4 ರಿಂದ 15 ವರ್ಷ ವಯೋಮಿತಿಯ ಮಕ್ಕಳನ್ನು ಗುರುತಿಸಿ ಪ್ರತಿ ಜಿಲ್ಲೆಯಿಂದ ಪ್ರತಿ ಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ 8 ಮಕ್ಕಳನ್ನು ಗುರುತಿಸಿ ಪ್ರಶಸ್ತಿ ನೀಡಲು ಹಾಗೂ ಆಯ್ಕೆಯಾದ ಮಕ್ಕಳಿಗೆ ರೂ. 10,000/- ನಗದು ಮತ್ತು ಪ್ರಶಸ್ತಿ ಪತ್ರ ನೀಡಲು ಆದೇಶಿಸಲಾಗಿದೆ. ಆಡಳಿತ ವೆಚ್ಚಕ್ಕಾಗಿ ಶೇಕಡ 2ರಷ್ಟು ಕಾಯ್ದಿರಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ಸರ್ಕಾರಿ ಆದೇಶದಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು ಭಾರತ ಸರ್ಕಾರದ ಮಾರ್ಗಸೂಚಿಯ ಅನ್ವಯ 2016-17 ನೇ ಸಾಲಿನಲ್ಲಿ ಮಾರ್ಪಡಿಸಿ ಆದೇಶ ಹೊರಡಿಸಲಾಗಿತ್ತು.

ಓದಲಾದ ಕ್ರಮ ಸಂಖ್ಯೆ (4)ರ ಏಕ ಕಡತ ಪ್ರಸ್ತಾವನೆಯಲ್ಲಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು, 2017-18ನೇ ಸಾಲಿನಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು ಈ ಕೆಳಕಂಡಂತೆ ಮಾರ್ಪಾಡು ಮಾಡಿ ಆದೇಶ ಹೊರಡಿಸಲು ಕೋರಿರುತ್ತಾರೆ.

| ಕ್ರ ಸಂ | ಸರ್ಕಾರದ ಆದೇಶ ದಿನಾಂಕ:28.07.2006 ರಲ್ಲಿದ್ದ ಮಾನದಂಡ | ಬದಲಾವಣೆ ಕೋರಿರುವ ಮಾನದಂಡ ಮತ್ತು ಕಾರಣ |
|---|---|---|
| 1. | 6 ರಿಂದ 15 ವರ್ಷದೊಳಗಿನ | ಇಂಡಿಯನ್ ಕೌನ್ಸಿಲ್ ಫಾರ್ ಚೈಲ್ಡ್ ವೆಲ್‌ಫೇರ್, ನವದೆಹಲಿ ಸಂಸ್ಥೆಯ ವತಿಯಿಂದ ಭಾರತ ಸರ್ಕಾರವು |

| | | |
|---|---|---|
| | ವಯೋಮಿತಿಯೊಳಗಿರಬೇಕು | ನೀಡುವ ಶೌರ್ಯ ಪ್ರಶಸ್ತಿಗೆ ವಯೋಮಿತಿಯನ್ನು 6 ರಿಂದ 18 ವರ್ಷದೊಳಗೆ ನಿಗಧಿಪಡಿಸಲಾಗಿದೆ. ಅಲ್ಲದೆ ಜೆಜೆ ಆ್ಯಕ್ಟ್ ಪ್ರಕಾರ 18 ವರ್ಷದ ಒಳಗಿನ ವಯೋಮಿತಿಯಲ್ಲಿರುವವರನ್ನು ಮಗುವೆಂದು ವ್ಯಾಖ್ಯಾನಿಸಲಾಗಿದೆ. ಆದ್ದರಿಂದ ಪ್ರಶಸ್ತಿಗೆ 6 ವರ್ಷಕ್ಕಿಂತ ಮೇಲ್ಪಟ್ಟು 18 ವರ್ಷದ ವಯೋಮಿತಿಯೊಳಗಿರಬೇಕೆಂದು ಮಾರ್ಪಾಡು ಮಾಡಲು ಕೋರಿರುತ್ತಾರೆ. |
| 2. | ಶಾಲಾ ಶಿಕ್ಷಣ ಪೂರ್ಣವಾಗುವವರೆಗೆ ಪ್ರತಿ ವರ್ಷ ಶಾಲಾ ಶುಲ್ಕ ಪುಸ್ತಕ ಮುಂತಾದವುಗಳಿಗೆ ರೂ.2000/- ಆರ್ಥಿಕ ನೆರವು ನೀಡಲಾಗುವುದು. | ಪ್ರಶಸ್ತಿಗೆ ಮಗುವಿನ ವಯಸ್ಸನ್ನು 18 ವರ್ಷ ನಿಗಧಿಪಡಿಸಿದರೆ, ಮಗುವು ದ್ವಿತೀಯ ಪಿ.ಯು.ಸಿ.ಯಲ್ಲಿ ವ್ಯಾಸಂಗ ಮಾಡುತ್ತಿರುತ್ತದೆ. ಆದ್ದರಿಂದ ದ್ವಿತೀಯ ಪಿ.ಯು.ಸಿ. ಪೂರ್ಣವಾಗುವವರೆಗೆ ಪ್ರತಿ ವರ್ಷ ಕಾಲೇಜು/ಶಾಲಾ ಶುಲ್ಕ, ಪುಸ್ತಕ ಮುಂತಾದವುಗಳಿಗೆ ರೂ.2000/- ಆರ್ಥಿಕ ನೆರವು ನೀಡಲಾಗುವುದೆಂದು ಮಾರ್ಪಾಡು ಮಾಡಲು ಕೋರಿರುತ್ತಾರೆ. |
| 3. | ಧೈರ್ಯ ಸಾಹಸವನ್ನು ಪ್ರದರ್ಶಿಸಿದ ಜೀವಂತ ಮಗುವಿಗೆ ರೂ. 10,000/- ಗಳ ನಗದನ್ನು ಪಾವತಿಸಲಾಗುತ್ತದೆ. | ಧೈರ್ಯ ಸಾಹಸವನ್ನು ಪ್ರದರ್ಶಿಸಿದ ಜೀವಂತ ಮಗುವಿಗೆ ಪ್ರಶಸ್ತಿ ಮೊತ್ತ ರೂ.10,000/-ಗಳ ನಗದನ್ನು ಪಾವತಿಸಲಾಗುತ್ತದೆ. ಕೆಲವೊಂದು ಪ್ರಕರಣಗಳಲ್ಲಿ ಧೈರ್ಯ ಸಾಹಸವನ್ನು ಪ್ರದರ್ಶಿಸುವ ಸಮಯದಲ್ಲಿ ಮಗು ಮರಣ ಹೊಂದಿರುತ್ತದೆ. ಧೈರ್ಯ ಸಾಹಸವನ್ನು ಪ್ರದರ್ಶಿಸಿದ ಸಮಯದಲ್ಲಿ ಮಗು ಮರಣ ಹೊಂದಿದಲ್ಲಿ ಅಂತಹ ಪ್ರಕರಣಗಳಲ್ಲಿ ರೂ.10,000/-ಗಳ ನಗದನ್ನು ಮಗುವಿನ ತಂದೆ/ತಾಯಿ/ಸಹೋದರ/ಸಹೋದರಿಗೆ ಪಾವತಿಸುವ ಬಗ್ಗೆ ಮಾರ್ಪಾಡು ಮಾಡಲು ಕೋರಿರುತ್ತಾರೆ. |
| 4. | ಜಿಲ್ಲಾಧಿಕಾರಿಗಳು, ಆಯ್ಕೆ ಸಮಿತಿಯ ಅಧ್ಯಕ್ಷರು, | ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು ದಿನಾಂಕ:28.07.2006ರ ಆದೇಶದಲ್ಲಿ ಜಾರಿಗೆ ತಂದಾಗ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ತದನಂತರ ಸದರಿ ಆದೇಶವನ್ನು ಮಾರ್ಪಡಿಸಿ ದಿನಾಂಕ:21.08.2007ರ ಆದೇಶದಲ್ಲಿ ಕಲೆ, ಶಿಕ್ಷಣ, ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಪ್ರಶಸ್ತಿಯನ್ನು ನೀಡಲು ಮಂಜೂರಾತಿ ನೀಡಲಾಗಿರುತ್ತದೆ. ದಿನಾಂಕ:01.07.2016ರ ಆದೇಶದಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ನೀಡುವ ಪ್ರಶಸ್ತಿಗೆ ಆಯ್ಕೆ ಸಮಿತಿಯ ಅಧ್ಯಕ್ಷರಾಗಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಇವರನ್ನು ನೇಮಿಸಲಾಗಿರುತ್ತದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಆದೇಶ ದಿನಾಂಕ:20.01.2014ರ ಆದೇಶದಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ನೀಡುವ ಪ್ರಶಸ್ತಿಗೆ ಆಯ್ಕೆ ಸಮಿತಿಯ ಅಧ್ಯಕ್ಷರಾಗಿ |

| | | |
|---|---|---|
| | | ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಇವರನ್ನು ನೇಮಿಸಲಾಗಿರುತ್ತದೆ. ಆದ್ದರಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಲು ಕೋರಿರುತ್ತಾರೆ.<br>1. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು- ಅಧ್ಯಕ್ಷರು<br>2. ಆರಕ್ಷಕ ಅಧೀಕ್ಷಕರು - ಸದಸ್ಯರು<br>3. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ. - ಸದಸ್ಯರು<br>4. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ- ಸದಸ್ಯ ಕಾರ್ಯದರ್ಶಿಗಳು |

ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಮಮಇ 16 ಮಮಅ 2017, ಬೆಂಗಳೂರು, ದಿನಾಂಕ:04.02.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2017-18ನೇ ಸಾಲಿನಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು ಈ ಕೆಳಕಂಡಂತೆ ಮಾರ್ಪಾಡು ಮಾಡಿ ಆದೇಶ ಹೊರಡಿಸಿದೆ. ಇಂಡಿಯನ್ ಕೌನ್ಸಿಲ್ ಫಾರ್ ಚೈಲ್ಡ್ ವೆಲ್‌ಫೇರ್, ನವದೆಹಲಿ ಸಂಸ್ಥೆಯ ವತಿಯಿಂದ ಭಾರತ ಸರ್ಕಾರವು ನೀಡುವ ಶೌರ್ಯ ಪ್ರಶಸ್ತಿಗೆ ವಯೋಮಿತಿಯನ್ನು 6 ರಿಂದ 18 ವರ್ಷದೊಳಗೆ ನಿಗಧಿಪಡಿಸಲಾಗಿದೆ. ಅಲ್ಲದ ಜೆಜೆ ಆಕ್ಟ್ ಪ್ರಕಾರ 18 ವರ್ಷದ ಒಳಗಿನ ವಯೋಮಿತಿಯಲ್ಲಿರುವವರನ್ನು ಮಗುವೆಂದು ವ್ಯಾಖ್ಯಾನಿಸಲಾಗಿದೆ.ಈ ಹಿನ್ನಲೆಯಲ್ಲಿ ಪ್ರಶಸ್ತಿಗ 6 ವರ್ಷಕ್ಕಿಂತ ಮೇಲ್ಪಟ್ಟು 18 ವರ್ಷದ ವಯೋಮಿತಿಯೊಳಗಿರತಕ್ಕದ್ದು.

ಪ್ರಶಸ್ತಿಗೆ ಮಗುವಿನ ವಯಸ್ಸನ್ನು 18 ವರ್ಷ ನಿಗಧಿಪಡಿಸಿದರೆ, ಮಗುವು ದ್ವಿತೀಯ ಪಿ.ಯು.ಸಿ.ಯಲ್ಲಿ ವ್ಯಾಸಂಗ ಮಾಡುತ್ತಿರುತ್ತದೆ. ಆದ್ದರಿಂದ ದ್ವಿತೀಯ ಪಿ.ಯು.ಸಿ. ಪೂರ್ಣವಾಗುವವರೆಗೆ ಪ್ರತಿ ವರ್ಷ ಕಾಲೇಜು/ಶಾಲಾ ಶುಲ್ಕ, ಪುಸ್ತಕ ಮುಂತಾದವುಗಳಿಗೆ ರೂ.2000/- ಆರ್ಥಿಕ ನೆರವು ನೀಡಲಾಗುವುದು.

ಧೈರ್ಯ ಸಾಹಸವನ್ನು ಪ್ರದರ್ಶಿಸಿದ ಜೀವಂತ ಮಗುವಿಗೆ ಪ್ರಶಸ್ತಿ ಮೊತ್ತ ರೂ.10,000/-ಗಳ ನಗದನ್ನು ಪಾವತಿಸಲಾಗುತ್ತದೆ. ಕೆಲವೊಂದು ಪ್ರಕರಣಗಳಲ್ಲಿ ಧೈರ್ಯ ಸಾಹಸವನ್ನು ಪ್ರದರ್ಶಿಸುವ ಸಮಯದಲ್ಲಿ ಮಗು ಮರಣ ಹೊಂದಿರುತ್ತದೆ. ಧೈರ್ಯ ಸಾಹಸವನ್ನು ಪ್ರದರ್ಶಿಸಿದ ಸಮಯದಲ್ಲಿ ಮಗು ಮರಣ ಹೊಂದಿದಲ್ಲಿ ಅಂತಹ ಪ್ರಕರಣಗಳಲ್ಲಿ ರೂ.10,000/-ಗಳ ನಗದನ್ನು ಮಗುವಿನ ತಂದೆ/ತಾಯಿ/ಸಹೋದರ/ಸಹೋದರಿಗೆ ಪಾವತಿಸತಕ್ಕದ್ದು.

ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಿದೆ.

1. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು-ಅಧ್ಯಕ್ಷರು
2. ಆರಕ್ಷಕ ಅಧೀಕ್ಷಕರು-ಸದಸ್ಯರು
3. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ - ಸದಸ್ಯರು

4. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ- ಸದಸ್ಯ ಕಾರ್ಯದರ್ಶಿ

ಉಳಿದಂತೆ ಆದೇಶ ಸಂಖ್ಯೆ:ಮಮಇ 91 ಮಮಅ 2016 ದಿನಾಂಕ: 01/07/2016 ರಲ್ಲಿನ ಅಂಶಗಳು ಮತ್ತು ಮಾರ್ಗಸೂಚಿಯಲ್ಲಿನ ಷರತ್ತುಗಳು ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂಧ್ಯಾ ಎಲ್. ನಾಯಕ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು-560 001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು.
4. ನಿರ್ದೇಶಕರು,ಪರಿಯೋಜನಾ ರಚನಾ ವಿಭಾಗ,ಯೋಜನಾ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
7. ಎಲ್ಲಾ ಜಿಲ್ಲೆಗಳ ಆರಕ್ಷಕ ಅಧೀಕ್ಷಕರುಗಳು
8. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
9. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ
10. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
11. ಎಲ್ಲಾ ಜಿಲ್ಲಾ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
12. ಎಲ್ಲಾ ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾ ಅಧಿಕಾರಿಗಳು.
13. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
14. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.47, 2ನೇಬ್ಲಾಕ್,2ನೇ ಮಹಡಿ,
15. ಖನಿಜ ಭವನ, ದಕ್ಷಿಣ ದ್ವಾರ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-2 ಮತ್ತು 10), ವಿಧಾನಸೌಧ.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರಮ ಸಂಖ್ಯೆ:3 ರಿಂದ 12 ನಿರ್ದೇಶಕರ ಮುಖಾಂತರ)

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾಮಟ್ಟದಲ್ಲಿ ನೀಡುವ ಪ್ರಶಸ್ತಿಯ ಆಯ್ಕೆಗೆ ಮಾರ್ಗಸೂಚಿಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಮಮಇ 169 ಮಮಅ 2007, ದಿನಾಂಕ:21.08.2007
2. ಸರ್ಕಾರದ ಆದೇಶ ಸಂಖ್ಯೆ:ಮಮಇ 169 ಮಮಅ 2007, ದಿನಾಂಕ:03.10.2007
3. ಸರ್ಕಾರದ ಆದೇಶ ಸಂಖ್ಯೆ:ಮಮಇ 91 ಮಮಅ 2016, ದಿನಾಂಕ:01.07.2016
4. ಸರ್ಕಾರದ ಆದೇಶ ಸಂಖ್ಯೆ: ಮಮಇ 16 ಮಮಅ 2017, ದಿನಾಂಕ: 06.09.2019
5. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರ ಏಕ ಕಡತ ಸಂಖ್ಯೆ: WCD/CW/AWD/3/2021

ನಿರ್ದೇಶನಾಲಯ 18 OCT 2022 C.W.

** ** **

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರ.ಸಂ (1)ರ ಆದೇಶದಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು 2007-08ನೇ ಸಾಲಿನಿಂದ ಮಾರ್ಪಡಿಸಿ ಭಾರತ ಸರ್ಕಾರದ ಮಾರ್ಗಸೂಚಿಯಂತೆ ಕಲೆ, ಶಿಕ್ಷಣ, ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ತೋರಿರುವ ಮಕ್ಕಳನ್ನು ಕೂಡ ರಾಜ್ಯ ಮಟ್ಟದಲ್ಲಿ ಆಯ್ಕೆ ಮಾಡಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:05.06.2007ರ ಆದೇಶ ಸಂ:ಮಮಇ 66 ಮಭಾಬ 2007 ರಲ್ಲಿ ರಚಿತವಾದ ಸಮಿತಿಯ ಅನುಮೋದನೆಯೊಂದಿಗೆ ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ರೀತಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಈ ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ಷೇತ್ರಕ್ಕೆ / ಜಿಲ್ಲೆಗೆ ಇಬ್ಬರಂತೆ ಒಟ್ಟು 224 ಮಕ್ಕಳನ್ನು ಆಯ್ಕೆ ಮಾಡಿ ರಾಜ್ಯ ಮಟ್ಟದಲ್ಲಿ ರೂ.10,000/- ನಗದು ಒಳಗೊಂಡಿರುವ ಪ್ರಶಸ್ತಿಯನ್ನು ಆಯಾ ಜಿಲ್ಲೆಗಳಲ್ಲಿ ನೀಡಲು ಹಾಗೂ ಮಾರ್ಪಡಿಸಿದ ಯೋಜನೆಯ ಜಾರಿಗಾಗಿ ಶೇ.2 ಆಡಳಿತಾತ್ಮಕ ವೆಚ್ಚವನ್ನು ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ (2)ರ ಆದೇಶದಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು ದಿನಾಂಕ:21.08.2007ರ ಸರ್ಕಾರಿ ಆದೇಶದನ್ವಯ ಭಾಗಶಃ ಪರಿಸ್ಕರಿಸಿ 2007-08ನೇ ಸಾಲಿನಿಂದ ಭಾರತ ಸರ್ಕಾರದ ಮಾರ್ಗಸೂಚಿಯಂತೆ ಕಲೆ, ಶಿಕ್ಷಣ, ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ತೋರಿರುವ 4 ರಿಂದ 15 ವರ್ಷ ವಯೋಮಿತಿಯ ಮಕ್ಕಳನ್ನು ಗುರುತಿಸಿ ಪ್ರತಿ ಜಿಲ್ಲೆಯಿಂದ ಪ್ರತಿ ಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ 8 ಮಕ್ಕಳನ್ನು ಗುರುತಿಸಿ ಪ್ರಶಸ್ತಿ ನೀಡಲು ಹಾಗೂ ಆಯ್ಕೆಯಾದ ಮಕ್ಕಳಿಗೆ ರೂ.10,000/- ನಗದು ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದೆಂದು ಆಡಳಿತ ವೆಚ್ಚಕ್ಕಾಗಿ ಶೇಕಡಾ 2 ರಷ್ಟು ಕಾಯ್ದಿರಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ (3)ರ ಆದೇಶದಲ್ಲಿ ಹೋಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯನ್ನು ಮಾರ್ಪಡಿಸಿ ಭಾರತ ಸರ್ಕಾರದ ಮಾರ್ಗಸೂಚಿಯಂತೆ ಯಾವುದೇ ಕ್ಷೇತ್ರದಲ್ಲಿ ನಾವೀನ್ಯತೆ (Innovation), ತಾರ್ಕಿಕ (Scholastic), ಕಲೆ (Art), ಕ್ರೀಡೆ (Sports), ಸಾಂಸ್ಕೃತಿಕ (Cultural), ಸಮಾಜ ಸೇವೆ (Social service) ಮತ್ತು ಸಂಗೀತ (Music) ಕ್ಷೇತ್ರಗಳಲ್ಲಿ ಅಸಾಧಾರಣೆ ಸಾಧನೆ ಮಾಡಿದ ಪ್ರತಿಭೆ ತೋರಿರುವ ಮಕ್ಕಳನ್ನು ಪ್ರೋತ್ಸಾಹಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ (4)ರ ಆದೇಶದಲ್ಲಿ, 2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಭಾರತ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯಂತೆ, ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣೆ ಸಾಧನೆ ಮಾಡಿದ ಮಕ್ಕಳನ್ನು ಪ್ರೋತ್ಸಾಹಿಸಲು ಆಯ್ಕೆ ಕ್ಷೇತ್ರಗಳನ್ನು ಕಲೆ (Art), ಕ್ರೀಡೆ (Sports), ಸಾಂಸ್ಕೃತಿಕ (Cultural) ಮತ್ತು ಸಂಗೀತ (Music) ಈ ಮೂರು ಕ್ಷೇತ್ರಗಳಲ್ಲಿ ವಿಲೀನಗೊಳಿಸಿ ಒಂದುಕ್ಷೇತ್ರವೆಂದು ಪರಿಗಣಿಸಿ, ಈ ನಾಲ್ಕು

..2

ಕ್ಷೇತ್ರ ನಾವೀನ್ಯತೆ (Innovation), ತಾರ್ಕಿಕ (Scholastic), ಕ್ರೀಡೆ (Sports), ಕಲೆ, ಸಾಂಸ್ಕೃತಿಕ ಮತ್ತು ಸಂಗೀತ (Art, Cultural & Music) ಗಳನ್ನು ನಿಗಧಿಪಡಿಸಿ ಪರಿಷ್ಕರಿಸಿ ಆದೇಶಿಸಲಾಗಿರುತ್ತದೆ.

ಮುಂದುವರೆದು, ಮೇಲೆ ಓದಲಾದ ಕ್ರ.ಸಂ.(5)ರ ಏಕ ಕಡತದಲ್ಲಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ದಕ್ಷಿಣ ಕನ್ನಡ ಇವರ ಪ್ರಸ್ತಾವನೆಯಂತೆ ಹಾಗೂ ದಿನಾಂಕ:18-06-2022ರ ಸಮಿತಿ ಸಭೆಯಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಕ್ರೀಡೆ, ನಾವೀನ್ಯತೆ ಹಾಗೂ ತಾರ್ಕಿಕ ಕ್ಷೇತ್ರಗಳಡಿ ನಿಗದಿಪಡಿಸಿರುವ ಮಾರ್ಗಸೂಚಿಗಳಲ್ಲಿ ಬದಲಾವಣೆ ಮಾಡಲು ಕೆಲವು ಸಲಹೆಗಳನ್ನು ನೀಡಿರುವ ಕಾರಣ ಪರಿಷ್ಕೃತ ಆದೇಶ ಹೊರಡಿಸುವಂತೆ ನಿರ್ದೇಶಕರು, ಮಮಅಇ ಇವರು ಕೋರಿರುತ್ತಾರೆ.

ಇದರಂತೆ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಮಮಇ 147 ಮಮಅ 2022, ಬೆಂಗಳೂರು: ದಿನಾಂಕ:17.10.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾಮಟ್ಟದಲ್ಲಿ ನೀಡುವ ಪ್ರಶಸ್ತಿಯ ಆಯ್ಕೆ ಮಾರ್ಗಸೂಚಿಯನ್ನು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಂತೆ ಪರಿಷ್ಕರಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

N. S. Khetawkar 17/10/2022

**(ನಿರ್ಮಲಾ ಎಸ್. ಖಿಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

**ಇವರಿಗೆ :**

1. ಪ್ರಧಾನ ಮಹಾಲೇಖಪಾಲರು (ಎ&ಈ), ಕರ್ನಾಟಕ, ಬೆಂಗಳೂರು-560001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು.
4. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ.
6. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
7. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
9. ಎಲ್ಲಾ ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾ ಅಧಿಕಾರಿಗಳು.
10. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-2 ಮತ್ತು 10), ವಿಧಾನಸೌಧ.
12. ಶಾಖಾ ರಕ್ಷಾ ಕಡತ / ಹೆಚ್ಚುವರಿ.

( ಕ್ರಮ ಸಂಖ್ಯೆ 6 ರಿಂದ 10 ರವರೆಗೆ ನಿರ್ದೇಶನಾಲಯದ ಮುಖಾಂತರ)

**ಸರ್ಕಾರದ ಆದೇಶ ಸಂಖ್ಯೆ ಮಮಇ 147 ಮಮಅ 2022, ಬೆಂಗಳೂರು: ದಿನಾಂಕ:17.10.2022ಕ್ಕೆ ಅನುಬಂಧ**

## ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾಮಟ್ಟದಲ್ಲಿ ನೀಡುವ ಪ್ರಶಸ್ತಿಯ ಆಯ್ಕೆ ಮಾರ್ಗಸೂಚಿಗಳು:

ಭಾರತ ಸರ್ಕಾರದ ಮಾರ್ಗಸೂಚಿಯಂತೆ ಕಲೆ, ಕ್ರೀಡೆ, ನಾವೀನ್ಯತೆ ಹಾಗೂ ತಾರ್ಕಿಕತೆಗಳಲ್ಲಿ ಅಸಾಧಾರಣ ಪ್ರತಿಭೆ ತೋರಿರುವ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವ ದೃಷ್ಟಿಯಿಂದ ಸದರಿ ಯೋಜನೆಯನ್ನು ಜಾರಿಗೆ ತರಲಾಗಿದೆ.

**I ) ಕ್ಷೇತ್ರಗಳು:**

- ನಾವೀನ್ಯತೆ (Innovation)
- ತಾರ್ಕಿಕ ಸಾಧನೆಗಳು (Scholastic)
- ಕ್ರೀಡೆ (Sports)
- ಕಲೆ (art), ಸಾಂಸ್ಕೃತಿಕ (Cultaral), ಸಂಗೀತ (music)

ಈ ನಾಲ್ಕು ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ತೋರಿರುವ ಮಕ್ಕಳನ್ನು ಆಯ್ಕೆ ಮಾಡುವುದು.

**II ) ವಯೋಮಿತಿ:**

- 5 ರಿಂದ 18 ವರ್ಷದ ಒಳಗಿನ ವಯೋಮಿತಿಯ ಮಕ್ಕಳನ್ನು ಪ್ರಶಸ್ತಿಗಾಗಿ ಆಯ್ಕೆಮಾಡುವುದು.
- ಪ್ರಶಸ್ತಿ ನೀಡುವಾಗ ಮಕ್ಕಳನ್ನು ಎರಡು ವರ್ಗಗಳಲ್ಲಿ, ಅಂದರೆ 5 ರಿಂದ 9 ವರ್ಷದ ಮಕ್ಕಳನ್ನು ಒಂದು ವರ್ಗದಲ್ಲಿ (Group) ಹಾಗೂ 10 ರಿಂದ 18 ವರ್ಷದ ಮಕ್ಕಳನ್ನು ಇನ್ನೊಂದು ವರ್ಗದಲ್ಲಿ ಪರಿಗಣಿಸುವುದು.

ವಯಸ್ಸಿನ ಬಗ್ಗೆ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿದ ಜನನ ಪ್ರಮಾಣ ಪತ್ರವನ್ನು ಪಡೆಯುವುದು.

**III ) ಪ್ರಶಸ್ತಿಗಳ ಸಂಖ್ಯೆ:**

- ಪ್ರತಿ ಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ 8 ಮಕ್ಕಳನ್ನು ಪ್ರಶಸ್ತಿಗೆ ಆಯ್ಕೆ ಮಾಡುವುದು.
- 4 ಪ್ರಶಸ್ತಿಗಳನ್ನು ಹೆಣ್ಣು ಮಕ್ಕಳಿಗೂ, 4 ಪ್ರಶಸ್ತಿಗಳನ್ನು ಗಂಡು ಮಕ್ಕಳಿಗೂ ನೀಡಲು ಆದ್ಯತೆ ನೀಡುವುದು. ಒಂದು ವೇಳೆ ಅರ್ಹ ಗಂಡು ಮಕ್ಕಳು ಲಭ್ಯವಿಲ್ಲದಿದ್ದಲ್ಲಿ ಹೆಣ್ಣು ಮಕ್ಕಳನ್ನು ಆಯ್ಕೆ ಮಾಡುವುದು. ಅರ್ಹ ಹೆಣ್ಣು ಮಕ್ಕಳು ಲಭ್ಯವಿಲ್ಲದಿದ್ದಲ್ಲಿ ಗಂಡು ಮಕ್ಕಳನ್ನು ಆಯ್ಕೆ ಮಾಡುವುದು.

**IV ) ಪರಿಗಣಿಸಬೇಕಾದ ಸಾಮಾನ್ಯ ಅಂಶಗಳು:**

- ಅಸಾಧಾರಣ ಪ್ರತಿಭೆ ಹೊಂದಿರುವ ಬಗ್ಗೆ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವ ಪತ್ರಿಕೆ ತುಣುಕು/ಪ್ರಮಾಣ ಪತ್ರಗಳನ್ನು ಪಡೆಯುವುದು.
- ಪ್ರಶಸ್ತಿಗಾಗಿ ಆಯ್ಕೆ ಮಾಡುವ ಮಕ್ಕಳು ಕನಿಷ್ಠ 5 ವರ್ಷ ಕರ್ನಾಟಕ ರಾಜ್ಯದಲ್ಲಿ ನೆಲಸಿರತಕ್ಕದ್ದು. ಈ ಬಗ್ಗೆ ಸ್ವಯಂ ದೃಢೀಕರಣ ಪಡೆಯುವುದು.

- ರಾಷ್ಟ್ರ/ರಾಜ್ಯ/ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿರುವ ಪ್ರಶಸ್ತಿ ಪಡೆದಿರುವ ಮಾಹಿತಿ ಪಡೆಯುವುದು.
- ಪ್ರಶಸ್ತಿಗೆ ಅರ್ಜಿ ಸಲ್ಲಿಸಿದ ನಂತರ ಮಗು ಮರಣ ಹೊಂದಿದಲ್ಲಿ, ಆ ಮಗು ಪ್ರಶಸ್ತಿಗೆ ಅರ್ಹವಾಗಿದ್ದಲ್ಲಿ ಮರಣೋತ್ತರ ಪ್ರಶಸ್ತಿಗೆ ಪರಿಗಣಿಸಬಹುದಾಗಿದೆ.
- ಹಿಂದಿನ ವರ್ಷಗಳಲ್ಲಿ ಜಿಲ್ಲಾಮಟ್ಟದಲ್ಲಿ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ.

**V) ಕ್ರೀಡಾ (Sports) ಕ್ಷೇತ್ರದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಪರಿಗಣಿಸಬೇಕಾದ ಅಂಶಗಳು.**

- ಪ್ರಶಸ್ತಿಯನ್ನು ನೀಡುವ ಹಿಂದಿನ 3 ವರ್ಷಗಳ ಕ್ರೀಡಾ ಸಾಧನೆಯನ್ನು ಪರಿಗಣಿಸುವುದು.
- ಅಂತರಾಷ್ಟ್ರೀಯ ಮಟ್ಟ, ರಾಷ್ಟ್ರೀಯ ಮಟ್ಟ, ರಾಜ್ಯ ಮಟ್ಟ ಅಥವಾ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿ ಪದಕ ಪಡೆದ ಕ್ರೀಡಾಪಟುಗಳ ಸಾಧನೆಯನ್ನು ಜೇಷ್ಠತೆಯ ಮೇರೆಗೆ ಈ ಕೆಳಕಂಡಂತೆ ಅಂಕಗಳನ್ನು ನೀಡುವ ಮಾನದಂಡವನ್ನು ನಿಗದಿಪಡಿಸುವುದು.

| **ಸ್ಥಾನ** | **ಅಂತರಾಷ್ಟ್ರೀಯ** | **ರಾಷ್ಟ್ರೀಯ** | **ರಾಜ್ಯ** | **ಜಿಲ್ಲೆ** |
|---|---|---|---|---|
| **ಚಿನ್ನ** | 150 | 70 | 30 | 15 |
| **ಬೆಳ್ಳಿ** | 120 | 60 | 20 | 10 |
| **ಕಂಚು** | 100 | 50 | 10 | 5 |
| **ಭಾಗವಹಿಸುವಿಕೆ** | 80 | 40 | 0 | 0 |

- ಒಂದಕ್ಕಿಂತ ಹೆಚ್ಚು ಕ್ರೀಡಾಪಟುಗಳು ಸಮಾನ ಅಂಕಗಳನ್ನು ಪಡೆದಲ್ಲಿ ವಯೋಹಿರಿತನಕ್ಕೆ ಹಾಗೂ ಹಿಂದಿನ ಗರಿಷ್ಠ ಕ್ರೀಡಾ ಸಾಧನೆಗೆ ಅನುಗುಣವಾಗಿ ಆಯ್ಕೆ ಮಾಡುವುದು.

**VI) ನಾವೀನ್ಯತೆ (Innovation) ಹಾಗೂ ತಾರ್ಕಿಕ (Scholastic) ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಪರಿಗಣಿಸಬೇಕಾದ ಅಂಶಗಳು.**

- ಅಭ್ಯರ್ಥಿಗಳು ಹಿಂದಿನ ಎರಡು ವರ್ಷಗಳಲ್ಲಿ ಸಾಧಿಸಿರುವ ಪ್ರಗತಿಯನ್ನಾಧರಿಸಿ ಆದ್ಯತೆ ನೀಡುವುದು.
- ಅಂತರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿದಲ್ಲಿ ಅಥವಾ ಪ್ರಚುರಪಡಿಸಿದಲ್ಲಿ ಈ ಕೆಳಕಂಡಂತೆ ಅಂಕಗಳನ್ನು ನೀಡುವ ಮಾನದಂಡವನ್ನು ನಿಗದಿಪಡಿಸುವುದು

| **ಕ್ರ.ಸ.** | **ಸ್ಥಾನ** | **ಅಂಕಗಳು** |
|---|---|---|
| 1 | ಅಂತರಾಷ್ಟ್ರೀಯ ಮಟ್ಟ | 150 |
| 2 | ರಾಷ್ಟ್ರೀಯ ಮಟ್ಟ | 100 |
| 3 | ರಾಜ್ಯ ಮಟ್ಟ | 75 |
| 4 | ಜಿಲ್ಲಾ ಮಟ್ಟ | 50 |

**VII) ಜಿಲ್ಲಾ ಮಟ್ಟದ ಆಯ್ಕೆ ಸಮಿತಿ**

- ಪ್ರತಿ ಜಿಲ್ಲೆಯಲ್ಲಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚನೆಯಾಗಿರುವ ಈ ಕೆಳಕಂಡ ಸಮಿತಿಯು ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳನ್ನು ಆಯ್ಕೆ ಮಾಡತಕ್ಕದ್ದು.

| | |
|---|---|
| 1. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು: | ಅಧ್ಯಕ್ಷರು |
| 2. ಉಪನಿರ್ದೇಶಕರು,ಸಾರ್ವಜನಿಕ ಶಿಕ್ಷಣ ಇಲಾಖೆ : | ಸದಸ್ಯರು |
| 3. ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ: | ಸದಸ್ಯರು |
| 4. ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾ ಅಧಿಕಾರಿಗಳು : | ಸದಸ್ಯರು |
| 5. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು | ಸದಸ್ಯರು |
| 6. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಂದ ನಾಮನಿರ್ದೇಶನ ಹೊಂದಿದ : | ಇಬ್ಬರು ಸದಸ್ಯರು |
| 7. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ : | ಸದಸ್ಯ ಕಾರ್ಯದರ್ಶಿಗಳು |

- **ಅನುಸರಿಸಬೇಕಾದ ಕ್ರಮಗಳು:-**

1. ಪ್ರತಿ ವರ್ಷ ಜೂನ್ ತಿಂಗಳಿನಲ್ಲಿ ಆಯಾ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಈ ಬಗ್ಗೆ ಅಧಿಕೃತವಾಗಿ ಪತ್ರಿಕಾ ಪ್ರಕಟಣೆ ನೀಡಿ ಅರ್ಜಿ ಆಹ್ವಾನಿಸಬೇಕು.
2. ಬಂದಂತಹ ಅರ್ಜಿಗಳನ್ನು ಕ್ರೋಢೀಕರಿಸಿ ಸಮಿತಿಯ ಮುಂದಿಟ್ಟು ಆಯ್ಕೆ ಮಾಡಬೇಕು.
3. ಈ ಪ್ರಶಸ್ತಿಯನ್ನು ಪ್ರತಿ ವರ್ಷ ಮಕ್ಕಳ ದಿನಾಚರಣೆಯಂದು ಆಯಾಯ ಜಿಲ್ಲೆಗಳಲ್ಲಿ ವಿತರಿಸಬೇಕು.
4. ಪ್ರಶಸ್ತಿಗಳಿಗೆ ಆಯ್ಕೆ ಮಾಡುವ ವೇಳೆಯಲ್ಲಿ 4 ಪ್ರಶಸ್ತಿಗಳನ್ನು ಹೆಣ್ಣು ಮಕ್ಕಳಿಗೂ, 4 ಪ್ರಶಸ್ತಿಗಳನ್ನು ಗಂಡು ಮಕ್ಕಳಿಗೂ ನೀಡಲು ಆದ್ಯತೆ ನೀಡುವುದು. ಒಂದು ವೇಳೆ ಅರ್ಹ ಗಂಡು ಮಕ್ಕಳು ಲಭ್ಯವಿಲ್ಲದಿದ್ದಲ್ಲಿ ಹೆಣ್ಣು ಮಕ್ಕಳನ್ನು ಆಯ್ಕೆ ಮಾಡಲು ಆದ್ಯತೆ ನೀಡುವುದು ಹಾಗೂ ಅರ್ಹ ಹೆಣ್ಣು ಮಕ್ಕಳು ಲಭ್ಯವಿಲ್ಲದಿದ್ದಲ್ಲಿ ಗಂಡು ಮಕ್ಕಳನ್ನು ಆಯ್ಕೆ ಮಾಡಲು ಅದ್ಯತೆ ನೀಡುವುದು.

N.S. Khatawker, 17/6/2022

**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡುತ್ತಿರುವ ರಾಜ್ಯ ಪ್ರಶಸ್ತಿಯ ಸಂಖ್ಯೆಯನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**

ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: ಮಮಅಇ/ಮಕ/16/2015-16, ದಿನಾಂಕ: 27.06.2015.

**ಪ್ರಸ್ತಾವನೆ:-**

ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ 2 ವ್ಯಕ್ತಿ ಮತ್ತು 2 ಸಂಸ್ಥೆಗಳಿಗೆ ಪ್ರತಿ ವರ್ಷ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ವ್ಯಕ್ತಿಗೆ ನೀಡುವ ನಗದು ಬಹುಮಾನದ ಮೊತ್ತ ತಲಾ ರೂ.25,000/- ಆಗಿರುತ್ತದೆ. ಸಂಸ್ಥೆಗೆ ನೀಡುವ ನಗದು ಬಹುಮಾನ ಮೊತ್ತ ತಲಾ ರೂ.1,00,000/- ಆಗಿರುತ್ತದೆ. ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡುವ ಬಹುಮಾನದ ಒಟ್ಟು ನಗದು ಮೊತ್ತ ರೂ.2.50 ಲಕ್ಷ ಆಗಿರುತ್ತದೆ. ದಿನಾಂಕ: 05.11.2014 ರಂದು 2014ನೇ ಸಾಲಿಗೆ ರಾಜ್ಯ ಪ್ರಶಸ್ತಿಗಾಗಿ ವ್ಯಕ್ತಿ ಮತ್ತು ಸಂಸ್ಥೆಗಳನ್ನು ಆಯ್ಕೆ ಮಾಡುವ ಸಭೆಯಲ್ಲಿ 2015ನೇ ಸಾಲಿನಿಂದ ಪ್ರತಿ ವಿಭಾಗಕ್ಕೆ (Division) 1 ವ್ಯಕ್ತಿ ಮತ್ತು 1 ಸಂಸ್ಥೆಯಂತೆ ಒಟ್ಟು 4 ವ್ಯಕ್ತಿ ಮತ್ತು 4 ಸಂಸ್ಥೆಗಳನ್ನು ಆಯ್ಕೆ ಮಾಡಲು ನಿರ್ಣಯಿಸಲಾಗಿದೆ. ಆದ್ದರಿಂದ, ಪ್ರತಿ ವಿಭಾಗಕ್ಕೆ (Division) 1 ವ್ಯಕ್ತಿ ಮತ್ತು 1 ಸಂಸ್ಥೆಯಂತೆ ಒಟ್ಟು 4 ವ್ಯಕ್ತಿ ಮತ್ತು 4 ಸಂಸ್ಥೆಗಳನ್ನು ಆಯ್ಕೆ ಮಾಡಿ ಪ್ರಶಸ್ತಿ ನೀಡಲು ಪರಿಷ್ಕೃತ ಆದೇಶವನ್ನು ಹೊರಡಿಸುವಂತೆ ಮತ್ತು ಈ ಪ್ರಶಸ್ತಿ ನೀಡಲು ತಗಲುವ ಹೆಚ್ಚುವರಿ ವೆಚ್ಚ ರೂ.2.50 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2235-02-102-0-99-100 (ಯೋಜನೆ) ಅಡಿಯಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮಕ್ಕಾಗಿ ಒದಗಿಸಿರುವ ಅನುದಾನದಲ್ಲಿ ಭರಿಸಲು ಅನುಮತಿ ನೀಡುವಂತೆ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಮೇಲೆ ಓದಲಾದ ಏಕ ಕಡತದಲ್ಲಿ ಪ್ರಸ್ತಾವನೆಯಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಮಮಇ 129 ಮಭಾಬ 2015 ದಿನಾಂಕ: 03.11.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಪ್ರಸ್ತುತ, ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ 2 ವ್ಯಕ್ತಿ ಮತ್ತು 2 ಸಂಸ್ಥೆಗಳಿಗೆ ನೀಡುತ್ತಿರುವ ರಾಜ್ಯ ಪ್ರಶಸ್ತಿಯ ಸಂಖ್ಯೆಯನ್ನು 4 ವ್ಯಕ್ತಿ ಮತ್ತು 4 ಸಂಸ್ಥೆಗಳಿಗೆ ಪರಿಷ್ಕರಿಸಿ ಮಂಜೂರಾತಿ ನೀಡಲಾಗಿದೆ ಮತ್ತು ಇದಕ್ಕೆ ತಗಲುವ ಹೆಚ್ಚುವರಿ ವೆಚ್ಚವನ್ನು 2015-16ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2235-02-102-0-99-100 (ಯೋಜನೆ) ಅಡಿಯಲ್ಲಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

2 . . .

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 790 ವೆಚ್ಚ-3/2015, ದಿನಾಂಕ:05.10.2015ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂಧ್ಯಾ ಎಲ್.ನಾಯಕ್)
ಸರ್ಕಾರದ ಅಧೀನ ಕಾರ್ಯದರ್ಶಿ-1
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆಸಂಖ್ಯೆ:5329, ಬೆಂಗಳೂರು-560 001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
4. ಉಪ ನಿರ್ದೇಶಕರು, ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನ ಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರ ಆಪ್ತಕಾರ್ಯದರ್ಶಿ.

Girls Hostel

## PROCEEDINGS OF THE GOVERNMENT OF KARNATAKA

Sub: Proposal for the starting of Hostel for Girls at District Level - regarding.

READ: D.O.letter No.DWCW/Plan CRE/90-91, dated: 07.12.90 from the Director of Women & Child Development, Bangalore.

PREAMBLE: The Director of Women & Child Development in their letter read at above has stated that several studies in the State have revealed that due to low level of literacy among Women the status of women has not improved. The litracy level of women is 24%. Female children are not encouraged to pursue their education especially in rural areas due to poverty. The second reason for the large dropout rate of girls from schools is due to the location of schools far away from their villages/homes and most of the economically weaker sections of the society are residing in rural areas.

Further the literacy level of all ages of female population as per the 1981 census is 28%. Enrolement of children from 1 to VII Standard declines from 100% to 34%. Percentage of enrolement of girls in rural areas from 1 to IV Standard is 44.7% and from V to VII Standard is 38% and the literacy level of children in the age group of 10-14 years is 81% and 73% in urban areas and 52% and 39% in rural areas among male and female respectively. This is a clear indicator that rural girls do not persue their education at a higher level due to lack of facilities.

Therefore, it is proposed to start 7 Hostels for girls in Bidar, Bellary, Belgaum, Bijapur, Gulbarga, Kolar and Raichur District during current year since the literacy level of Women and Girls in these district is very poor. This will facilitate rural girls to get higher education which will be helpful for them to improve their status.

The estimated expenditure for starting one girls hostel with 50 boarders is Rs.2,69,600.00. The proposal has been examin by Government.

GOVERNMENT ORDER NO.SWL 242 SWW 90, B'LORE, DATED:26.3.1991.

Sanction is accorded for starting of seven new girls

Scanned with CamScanner

hostels in Bidar, Bellary, Belgaum, Bijapur, Gulbarga, Kolar and Raichur District in the Department of Women and Child Development subject to the following conditions:

i) The posts proposed to be created are filled up by the redeployment of staff within the Department and no recruitment should be made.

